ಕನ್ನಡಪ್ರಭ
ಬುಧವಾರ 6.05.2026



ರೈತ ಮುಖಂಡ ಪೂಜಾರಪ್ಪಗೆ ಸನ್ಮಾನ

ಪಾವಗಡ: ವಿವಿಧ ಜನ ಪರ ಹೋರಾಟಗಳ ಮೂಲಕ ಶಾಶ್ವತ ಕುಡಿಯುವ ನೀರು ಹಾಗೂ ನೀರಾವರಿ ಯೋಜನೆಗಳಿಗೆ ಶ್ರಮಿಸುತ್ತಿರುವ ಕರ್ನಾಟಕ ರಾಜ್ಯ ರೈತ ಸಂಘ - ಹಸಿರುಸೇನೆಯ ಜಿಲ್ಲಾಧ್ಯಕ್ಷ ಪೂಜಾರಪ್ಪ ಅವರನ್ನು ಮಂಗಳವಾರ ಮೈಸೂರು ಜಿಲ್ಲೆಯ ಅನೇಕ ಜನ ರೈತ ಮುಖಂಡರು ಪಾವಗಡಕ್ಕೆ ಆಗಮಿಸಿ ಸನ್ಮಾನಿಸಿದರು. ಈ ವೇಳೆ ಮಾತನಾಡಿದ ಮುಖಂಡರು ಬರದ ನಾಡಿನಲ್ಲಿ ಪೂಜಾರಪ್ಪ ಅವರ ಹೋರಾಟದ ಕುರಿತು ಮೆಚ್ಚುಗೆ ಮಾತುಗಳನ್ನಾಡಿದರು. ಈ ಸಂದರ್ಭದಲ್ಲಿ ಹೂಣಸೂರು ಶ್ರೀನಿವಾಸ್, ರವಿಕುಮಾರ್, ರೇವಣ್ಣ,ಕುಮಾರ್ ಈರಣ್ಣ, ಸದಾಶಿವಪ್ಪ, ಚಿತ್ತಯ್ಯ ,ನಾಗರಾಜಪ್ಪ ಇತರೆ ಅನೇಕರಿದ್ದರು.

ಗರಿಷ್ಠ 34°C ಕನಿಷ್ಠ 23°C

ಸುದ್ದಿ ಸಿಂಚನ

ಡಾ.ರಫೀಕ್ ಅಹಮದ್ ಜನ್ಮದಿನ ಆಚರಣೆ

ತುಮಕೂರು: ಮಾಜಿ ಶಾಸಕ, ಎಐಸಿಸಿ ಅಲ್ಪಸಂಖ್ಯಾತರ ಘಟಕದ ಸಂಚಾಲಕ ಡಾ.ಎಸ್.ರಫೀಕ್ ಅಹಮದ್ ಅವರ 56ನೇ ಹುಟ್ಟು ಹಬ್ಬದ ಅಂಗವಾಗಿ ಸ್ನೇಹ ಬಳಗದ ವತಿಯಿಂದ ಜಿಲ್ಲಾ ಸರ್ಕಾರಿ ಆಸ್ಪತ್ರೆಯ ಒಳ ರೋಗಿಗಳಿಗೆ ಹಣ್ಣು, ಬ್ರಡ್ ವಿತರಿಸುವ ಮೂಲಕ ಸರಳವಾಗಿ ಆಚರಿಸ ಲಾಯಿತು. ಈ ವೇಳೆ ಮಾತನಾಡಿದ ಬಳಗದ ಮೆಹ ಬೂಬ್ ಪಾಷ, ತುಮಕೂರು ನಗರ ವಿಧಾನಸಭಾ ಕ್ಷೇತ್ರದಲ್ಲಿ 2013 ರಿಂದ 2018 ರವರೆಗೆ ಶಾಸಕರಾಗಿ ಕೆಲಸ ಮಾಡಿದ್ದ ರಫೀಕ್ ಅಹಮದ್ ಅವರು ಸ್ಮಾರ್ಟ್ ಸಿಟಿಯಂ ತಹ ಯೋಜನೆಗೆ ತುಮಕೂರು ನಗರ ಆರ್ಹವಾಗಲು ಶ್ರಮವಹಿಸಿದ್ದರು ಎಂದರು. ಕಾಂಗ್ರೆಸ್ ಮುಖಂಡರಾದ ಆಟೋ ರಾಜು, ಮಹಮದ್ ಜೈದ್, ಮೆಹಬೂಬ್ ಪಾಷ, ರಾಜಣ್ಣ, ಆಸ್ಗರ್, ಅದೀಂ ಅಹಮದ್, ಸಾಧಿಕ್, ಜಿಯಾ ವುಲ್ಲಾ, ನಾಶಿರ್, ಆದಿಲ್, ಮಹಿಳಾ ವಿಭಾಗದ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷೆ ಮಂಗಳ, ಶಹಾಬುದ್ದಿನ್, ಮಹಮದ್ ಆಲಿ, ಶಾವಿದ್, ಸುವರ್ಣ ಕರ್ನಾಟಕ ಕಾರ್ಮಿಕ ಪರಿಷತ್‌ನ ಅಧ್ಯಕ್ಷರಾದ ಸಾಧಿಕ್ ಪಾಷ, ಉಪಾಧ್ಯಕ್ಷ ಸೋಹೇಲ್ ಪಾಷ, ಪ್ರಧಾನ ಕಾರ್ಯದರ್ಶಿ ಶಹಬಾಜ್, ಜಿಯಾವುಲ್ಲಾ ಬಾಬು, ಮಹಮದ್ ಉಬೇದುಲ್ಲಾ, ರವಿ, ನಟರಾಜ ಶೆಟ್ಟಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಅಭಿವೃದ್ಧಿ ರಾಜಕಾರಣಕ್ಕೆ ಸಂದ ಗೆಲುವು: ಗೌಡ

ಶಿರಾ: ಪಶ್ಚಿಮ ಬಂಗಾಳ ಸೇರಿದಂತೆ ಮೂರು ರಾಜ್ಯಗಳ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ ಜಯಭೇರಿ ಬಾರಿಸಿರುವುದು ಪ್ರಧಾನಿ ನರೇಂದ್ರ ಮೋದಿ ಅವರ ನಾಯಕತ್ವ, ಅಮಿತ್ ಷಾ ಅವರ ಚಾಣಾಕ್ಷತೆ ಮತ್ತು ಅಭಿವೃದ್ಧಿ ಪರ ರಾಜಕಾರಣಕ್ಕೆ ಸಂದ ದೊಡ್ಡ ಗೆಲುವಾಗಿದೆ ಎಂದು ವಿಧಾನಪರಿಷತ್ ಸದಸ್ಯ ಚಿದಾನಂದ್ ಎಂ.ಗೌಡ ಹೇಳಿದರು. ಮಧುಗಿರಿ ಸಂಘಟನಾತ್ಮಕ ಜಿಲ್ಲೆ ವತಿಯಿಂದ ಮಂಗಳವಾರ ನಗರದ ಅಂಬೇಡ್ಕರ್‌ಸರ್ಕಲ್‌ನಲ್ಲಿ ವಿಜಯೋತ್ಸವ ಆಚರಿಸಿ ಸಿಹಿ ಹಂಚಿ ಪಟಾಕಿ ಸಿಡಿಸಿ ಸಂಭ್ರಮಿಸಿ ಮಾತನಾಡಿದರು. ಈಗಾಗಲೇ ದೇಶದ 20 ರಾಜ್ಯಗಳಲ್ಲಿ ಸ್ವಂತ ಬಲದಲ್ಲಿ ಬಿಜೆಪಿ ಅಧಿಕಾರ ಮಾಡುತ್ತಿದೆ. ಮುಂದಿನ ದಿನಗಳಲ್ಲಿ ಸಂಪೂರ್ಣವಾಗಿ ದೇಶದಲ್ಲಿ ಅಧಿಕಾರಕ್ಕೆ ಬರಲಿದೆ ಎಂದ ಅವರು ಪಶ್ಚಿಮ ಬಂಗಾಳದಲ್ಲಿ ಮಮತ ಬ್ಯಾನರ್ಜಿ ಸಂಪೂರ್ಣ ಭ್ರಷ್ಟಾಚಾರದ ಆಡಳಿತ ನಡೆಸಿದ್ದು, ಇದರಿಂದ ಬೇಸತ್ತ ಜನರು ಅವರಿಗೆ ತಕ್ಕ ಪಾಠ ಕಲಿಸಿದ್ದಾರೆ ಎಂದರು. ಈ ಸಂದರ್ಭದಲ್ಲಿ ಶಿರಾ ಗ್ರಾಮಾಂತರ ಮಂಡಲ ಅಧ್ಯಕ್ಷರಾದ ಈರಣ್ಣ ಪಟೇಲ್, ಜಿಲ್ಲಾ ಉಪಾಧ್ಯಕ್ಷರುಗಳಾದ ಚಿಕ್ಕಣ್ಣ ಮತ್ತು ಮದ್ದೇವಳ್ಳಿ ರಾಮಕೃಷ್ಣಪ್ಪ, ನಗರ ಮಹಿಳಾ ಮೋರ್ಚಾ ಅಧ್ಯಕ್ಷರಾದ ನಾಗರತ್ನಮ್ಮ, ಗ್ರಾಮಾಂತರ ಮಹಿಳಾ ಮೋರ್ಚಾ ಅಧ್ಯಕ್ಷರಾದ ಪುಷ್ಪಾವತಿ, ರಾಜ್ಯ ಕಾರ್ಯಕಾರಿಣಿ ಸದಸ್ಯ ಬರಗೂರು ಶಿವಕುಮಾರ್, ಶಿರಾ ತಾಲೂಕು ಮಂಡಲ ಪ್ರಧಾನ ಕಾರ್ಯದರ್ಶಿ ಭಾಸ್ಕರ್, ನಗರ ಯುವ ಮೋರ್ಚಾ ಅಧ್ಯಕ್ಷರಾದ ಶಿವು ಸ್ನೇಹಪ್ರಿಯ, ಗ್ರಾಮಾಂತರ ಮಂಡಲ ಉಪಾಧ್ಯಕ್ಷ ಬೊಪ್ಪರಾಯಪ್ಪ, ರೈತ ಮೋರ್ಚಾ ಪ್ರಧಾನ ಕಾರ್ಯದರ್ಶಿ ಮೂಗನಹಳ್ಳಿ ರಾಮು, ಎಸ್ ಟಿ ಮೋರ್ಚಾ ಅಧ್ಯಕ್ಷರಾದ ತೇಜೇಶ್ವರ್, ಸೈಯದ್ ಬಾಬಾ ಸೇರಿದಂತೆ ಹಲವರು ಹಾಜರಿದ್ದರು.

ಹಾವು ಕಚ್ಚಿ ಯುವಕ ಸಾವು

ಕುಣಿಗಲ್: ತನ್ನ ಹೊಲದಲ್ಲಿ ಬೆಳೆದಿದ್ದ ಜೋಳದ ಬೆಳೆಗೆ ನೀರು ಕಟ್ಟಲೆಂದು ಹೋಗಿದ್ದ ಯುವಕನಿಗೆ ಹಾವು ಕಚ್ಚಿ ಸಾವನ್ನಪ್ಪಿರುವ ಘಟನೆ ತಾಲೂಕಿನ ಕಸಬಾ ಹೋಬಳಿ ಕೊತ್ತಿಪುರ ಕಾಲೋನಿಯಲ್ಲಿ ನಡೆದಿದೆ. ಮೃತನನ್ನು ಚಂದನ್ (23) ಎಂದು ಗುರುತಿಸಲಾಗಿದೆ.



ರಾತ್ರಿ 7.30 ಸಮಯದಲ್ಲಿ ಹೋಗುವಾಗ ಆತನಿಗೆ ಅಪರಿಚಿತ ವಿಷಪೂರಿತ ಹಾವು ಕಚ್ಚಿರುವುದಾಗಿ ತಿಳಿದುಬಂದಿದೆ. ಈ ಸಂಬಂಧ ಹತ್ತಿರದ ನಾಟಿ ವೈದ್ಯರ ಬಳಿ ಔಷಧಿ ಕೊಡಿಸಿ ಮನೆಯಲ್ಲಿಯೇ ಇಡೀ ರಾತ್ರಿ ಆತನನ್ನು ನೋಡಿಕೊಂಡಿದ್ದು ಚಿಕಿತ್ಸೆ ಫಲಕಾರಿ ಆಗದ ಹಿನ್ನೆಲೆಯಲ್ಲಿ ಕುಣಿಗಲ್ ಪಟ್ಟಣದ ಸರ್ಕಾರಿ ಆಸ್ಪತ್ರೆಗೆ ಬೆಳಿಗ್ಗೆ ಕರೆತರುವಾಗ ಮಾರ್ಗಮಧ್ಯೆ ಮೃತಪಟ್ಟಿದ್ದಾನೆ ಎಂದು ಆತನ ಸೋದರ ಅರುಣ್ ಕುಣಿಗಲ್ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ.



ಮಾಜಿ ಶಾಸಕ, ಎಐಸಿಸಿ ಅಲ್ಪಸಂಖ್ಯಾತರ ಘಟಕದ ಸಂಚಾಲಕ ಡಾ.ಎಸ್.ರಫೀಕ್ ಅಹಮದ್ ಅವರ 56ನೇ ಹುಟ್ಟು ಹಬ್ಬದ ಅಂಗವಾಗಿ ಸ್ನೇಹ ಬಳಗದ ವತಿಯಿಂದ ಜಿಲ್ಲಾ ಸರ್ಕಾರಿ ಆಸ್ಪತ್ರೆಯ ಒಳ ರೋಗಿಗಳಿಗೆ ಹಣ್ಣು, ಬ್ರಡ್ ವಿತರಿಸುವ ಮೂಲಕ ಸರಳವಾಗಿ ಆಚರಿಸಿಲಾಯಿತು.



ಮಧುಗಿರಿ ಸಂಘಟನಾತ್ಮಕ ಜಿಲ್ಲೆ ವತಿಯಿಂದ ಮಂಗಳವಾರ ಅಂಬೇಡ್ಕರ್‌ಸರ್ಕಲ್‌ನಲ್ಲಿ ಚುನಾವಣಾ ವಿಜಯೋತ್ಸವ ಆಚರಿಸಿ ಸಿಹಿ ಹಂಚಿ ಪಟಾಕಿ ಸಿಡಿಸಿ ಸಂಭ್ರಮಿಸಲಾಯಿತು. ವಿಧಾನಪರಿಷತ್ ಸದಸ್ಯ ಚಿದಾನಂದ್ ಎಂ.ಗೌಡ, ಈರಣ್ಣ ಪಟೇಲ್, ಚಿಕ್ಕಣ್ಣ , ಮದ್ದೇವಳ್ಳಿ ರಾಮಕೃಷ್ಣಪ್ಪ ಇತರರಿದ್ದರು.

ರಾಜಕಾರಣಿಗಳಿಗೆ ಕನ್ನಡ ಸಾಹಿತ್ಯ, ಸಂಸ್ಕೃತಿ ಬೇಕಾಗಿಲ್ಲ

ಕಸಾಪ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಸಾಹಿತಿ ಡಾ. ಕರೀಗೌಡ ವಿಷಾದ | ಸಾಧಕರಿಗೆ ದತ್ತಿ ಪ್ರಶಸ್ತಿ ಗೌರವ

• **ಕನ್ನಡಪ್ರಭ ವಾರ್ತೆ** ತುಮಕೂರು

ಹಿಂದೆ ರಾಜಾಶ್ರಯದಲ್ಲಿ ಸಾಹಿತ್ಯ ರಚನೆ ಆಗುತ್ತಿತ್ತು. ರಾಜಮಹಾರಾಜರು ಸಾಹಿತ್ಯ, ಸಾಹಿತಿಗಳನ್ನು ಪ್ರೋತ್ಸಾಹಿಸುತ್ತಿದ್ದರು. ಈಗ ಅಂತಹ ಪ್ರೋತ್ಸಾಹ ಸಿಗುತ್ತಿಲ್ಲ. ಸರ್ಕಾರ ಪುಸ್ತಕಗಳನ್ನು ಖರೀದಿಸಿ ನಾಲ್ಕು ವರ್ಷಗಳಾಗಿವೆ. ಯಾವ ಸರ್ಕಾರಗಳೂ ಸಾಹಿತ್ಯವನ್ನು ಪ್ರೋತ್ಸಾಹಿಸುತ್ತಿಲ್ಲ ಈಗಿನ ರಾಜಕಾರಣಿಗಳಿಗೆ ಸಾಹಿತ್ಯ, ಸಂಸ್ಕೃತಿ ಬೇಕಾಗಿಲ್ಲ ಎಂದು ಸಾಹಿತಿ ಡಾ. ಕರೀಗೌಡ ಬೀಚನಹಳ್ಳಿ ವಿಷಾದಿಸಿದರು.

ನಗರದ ಕನ್ನಡ ಭವನದಲ್ಲಿ ಮಂಗಳವಾರ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನಿಂದ ನಡೆದ ಸಂಸ್ಥಾಪನಾ ದಿನಾಚರಣೆ ಹಾಗೂ ವಿವಿಧ ದತ್ತಿ ಪ್ರಶಸ್ತಿ ಪ್ರದಾನ ಸಮಾರಂಭ ಉದ್ಘಾಟಿಸಿ ಮಾತನಾಡಿದರು

ಶಾಲಾಕಾಲೇಜು ಮಕ್ಕಳು ಪುಸ್ತಕ ಓದಬೇಕು. ಪುಸ್ತಕಗಳಲ್ಲಿ ಸಿಗುವ ಜ್ಞಾನ ಮೊಬೈಲ್‌ಗಳಲ್ಲಿ ಸಿಗುವು ದಿಲ್ಲ, ಪುಸ್ತಕಗಳಲ್ಲಿ ಬಹುಮುಖಿ ಜ್ಞಾನ ದೊರೆಯು ತ್ತದೆ. ಕನ್ನಡ ಭಾಷೆ ಸಾಹಿತ್ಯ, ಸಂಸ್ಕೃತಿ ಬೆಳೆಸಲು ಮೈಸೂರು ಮಹಾರಾಜರು 112 ವರ್ಷಗಳ ಹಿಂದೆ ಕನ್ನಡ ಸಾಹಿತ್ಯ ಪರಿಷತ್ ಸ್ಥಾಪನೆಯಾಗಲು ಕಾರಣರಾದರು. ಅಂದಿನಿಂದ ಇಂದಿನವರೆಗೆ ಪರಿಷತ್ತು ಕನ್ನಡ ಭಾಷೆ, ಸಾಹಿತ್ಯ, ಸಂಸ್ಕೃತಿ, ಪುಸ್ತಕ ಸಂಸ್ಕೃತಿ ಬೆಳೆಸುವ ಚಟುವಟಿಕೆ ನಡೆಸಿಕೊಂಡು ಬರುತ್ತಿದೆ. ಸರ್ಕಾರ ಹಾಗೂ ದಾನಿಗಳು ಪರಿಷತ್ತಿನ ಕಾರ್ಯಚಟುವಟಿಕೆ ಗಳಿಗೆ ಸಹಕರಿಸಬೇಕು ಎಂದು ಮನವಿ ಮಾಡಿದರು.



ಕನ್ನಡ ಭವನದಲ್ಲಿ ಮಂಗಳವಾರ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನಿಂದ ಸಂಸ್ಥಾಪನಾ ದಿನಾಚರಣೆ ಹಾಗೂ ವಿವಿಧ ದತ್ತಿ ಪ್ರಶಸ್ತಿ ಪ್ರದಾನ ಸಮಾರಂಭ ನಡೆಯಿತು.

ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಕೆ.ಎಸ್. ಸಿದ್ಧಲಿಂಗಪ್ಪ ಮಾ ತನಾಡಿ, ಸಾಹಿತ್ಯ ಪರಿಷತ್ತಿನ ಚಟುವಟಿಕೆಗಳು ನಿಲ್ಲಬಾ ರದು, ನಿರಂತರವಾಗಿ ಮುನ್ನಡೆಯಬೇಕು. ಪರಿಷತ್ತಿನ ಚಟುವಟಿಕೆ ನಡೆದುಬಂದಿರುವುದೇ ರಾಜಾಶ್ರಯದಲ್ಲಿ ನಂತರ ಸರ್ಕಾರದ ಅನುದಾನದಲ್ಲಿ, ದಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಪರಿಷತ್ತಿಗೆ ಸಹಾಯ ಮಾಡುತ್ತಿ ದ್ದಾರೆ. ಬೇಡುವ ಕೈ ಶುದ್ಧವಾಗಿದ್ದರೆ ಕೊಡುವ ಕೈಗಳಿಗೆ ಕೊರತೆಯಿಲ್ಲ ಎಂದರು.

ಈ ವೇಳೆ ದೇವಪ್ರಕಾಶ್ ಮಾತೃಶ್ರೀ ಭಾಗೀರಥಮ್ಮ ದತ್ತಿ ಪ್ರಶಸ್ತಿಯನ್ನು ಸುಶೀಲ ಸದಾಶಿವಯ್ಯ ಅವರಿಗೆ ಪ್ರವಾಸ ಸಾಹಿತ್ಯಕ್ಕಾಗಿ, ಮಕ್ಕಳ ಸಾಹಿತ್ಯದ ಶಾಂಪುರ ಭಾಗೀರಥಮ್ಮ ನೆನಪಿನ ಪ್ರಶಸ್ತಿಯನ್ನು ಪ.ನಾ. ಹಳ್ಳಿ ಹರೀಶ್ ಕುಮಾರ್‌ಅವರಿಗೆ, ದೇವಪ್ರಕಾಶ್ ಹಾಸ್ಯ ಸಾಹಿತ್ಯ ಪ್ರಶಸ್ತಿಯನ್ನು ತುರುವೇಕೆರೆ ಮಂಜೇಶ್ ಅವ ರಿಗೆ ಹಾಗೂ ದೇವಪ್ರಕಾಶ್ ಮಾಧ್ಯಮ ಪ್ರಶಸ್ತಿಯನ್ನು ಹಿರಿಯ ಪತ್ರಿಕಾ ಛಾಯಾಗ್ರಾಹಕರಾದ ಟಿ.ಆರ್. ರೇಣುಕಾಪ್ರಸಾದ್ ಹಾಗೂ ಟಿ.ಎಚ್. ಸುರೇಶ್ ಅವರಿಗೆ ಪ್ರದಾನ ಮಾಡಲಾಯಿತು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ನಿಕಟಪೂರ್ವ ಅಧ್ಯಕ್ಷೆಬಾ.ಹ. ರಮಾಕುಮಾರಿ,ಕೈಗಾರಿಕೋದ್ಯಮಿ ಹೆಚ್.ಜಿ ಚಂದ್ರಶೇಖರ್, ಸರ್ವೋದಯ ಶಿಕ್ಷಣ ಸಂಸ್ಥೆ ಜಂಟಿ ಕಾರ್ಯದರ್ಶಿ ಕೆ.ವಿ. ಸುಬ್ಬರಾವ್, ಇತಿಹಾಸ ಸಂಶೋಧಕ ಡಾ. ಡಿ.ಎನ್. ಯೋಗೀಶ್ವರಪ್ಪ, ಜಿಲ್ಲಾ ಕಸಾಪ ಗೌರವ ಕಾರ್ಯದರ್ಶಿ ಕಂಟಲಗೆರೆ ಸಣ್ಣಹೊನ್ನಯ್ಯ, ಕೋಶಾಧ್ಯಕ್ಷ ಎಂ.ಎಚ್. ನಾಗ ರಾಜು ಮೊದಲಾದವರು ಭಾಗವಹಿಸಿದ್ದರು.

ದೊಡ್ಡಾಘಟ್ಟ ಚಂದ್ರೇಶ್‌ರನ್ನು ತುಳಿಯುವ ಪ್ರಯತ್ನ ಸಲ್ಲದು

ಶಾಸಕ ಎಂ.ಟಿ.ಕೃಷ್ಣಪ್ಪ ಮೇಲೆ ಚಂದ್ರೇಶ್ ಅಭಿಮಾನಿಗಳಿಂದ ಆರೋಪ | ಹಗೆತನ ಮುಂದುವರಿಸದಂತೆ ಕಿವಿಮಾತು

• **ಕನ್ನಡಪ್ರಭ ವಾರ್ತೆ** ತುರುವೇಕೆರೆ

ರಾಜ್ಯ ಯುವ ಜೆಡಿಎಸ್ ಪ್ರಧಾನ ಕಾರ್ಯದರ್ಶಿ ದೊಡ್ಡಾಘಟ್ಟದ ಚಂದ್ರೇಶ್ ತಾಲೂಕಿನಲ್ಲಿ ತಮ್ಮ ಸೇವಾ ಟ್ರಸ್ಟ್ ಮೂಲಕ ಜನ ಸಾಮಾನ್ಯರಿಗೆ ತಮ್ಮದೇ ಆದ ಸೇವೆ ನೀಡುತ್ತಿದ್ದು, ಜನ ಮನ್ನಣೆಗಳಿಸಿದ್ದಾರೆ. ಆದರೆ ಶಾಸಕ ಶಾಸಕ ಎಂ.ಟಿ.ಕೃಷ್ಣಪ್ಪ ತುಳಿಯುವ ಪ್ರಯತ್ನ ಮಾಡುತ್ತಿದ್ದಾರೆ ಎಂದು ಚಂದ್ರೇಶ್ ಅಭಿಮಾನಿಗಳು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ತಾಲೂಕಿನ ಸೊರವನಹಳ್ಳಿಯ ಆದಿಶಕ್ತಿ ಕಾಳಘಟ್ಟಮ್ಮ ದೇವಾಲಯದ ಆವರಣದಲ್ಲಿ ನಡೆಸಿದ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಮುಖಂಡ ಕೋಡಿ ನಾಗಸಂದ್ರದರಾಘವೇಂದ್ರ, ಇತ್ತೀಚೆಗೆಉದ್ಘಾಟನೆಗೊಂಡ ಆದಿಶಕ್ತಿ ಕಾಳಘಟ್ಟಮ್ಮ ದೇವಾಲಯದ ಧಾರ್ಮಿಕ ಸಭೆಗೆ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿಯವರನ್ನು ಕರೆಸುವಲ್ಲಿ ದೊಡ್ಡಾಘಟ್ಟ ಚಂದ್ರೇಶ್ ರವರ ಪಾತ್ರ ಹಿರಿದಾಗಿದೆ. ತಮ್ಮ ನಾಯಕರನ್ನು ಕರೆಸಿದ್ದ ಬಗ್ಗೆ ಅಭಿಮಾನದಿಂದ ದೊಡ್ಡಾಘಟ್ಟ ಚಂದ್ರೇಶ್ ರವರನ್ನು ಅಭಿಮಾನಿಗಳು ಸಮಾರಂಭದಲ್ಲಿ ಹೆಚ್ಚಾಗಿ ಗೌರವಿಸಿದ್ದರು. ಇದರಿಂದ ಅಸಮಾಧಾನಗೊಂಡಿರುವಶಾಸಕಎಂ.ಟಿ.ಕೃಷ್ಣಪ್ಪನವರು ಟಿ.ಬಿ.ಕ್ರಾಸ್‌ನಲ್ಲಿ ಮುಂಬರುವ ದಿನಗಳಲ್ಲಿ ಉದ್ಘಾಟನೆಗೊಳ್ಳಲಿರುವ ದೇವಾಲಯದ ಉದ್ಘಾಟನೆಗೆ ಕುಮಾರಸ್ವಾಮಿಯವರನ್ನು ನಾನು ಕರೆಸುತ್ತಿದ್ದೇನೆ ಎಂದು ಹೇಳಿದ್ದಾರೆ. ಇದನ್ನುಬಂಡವಾಳಮಾಡಿಕೊಂಡಶಾಸಕರು ದೇವಾಲಯದ ಆಹ್ವಾನ ಪತ್ರಿಕೆಯನ್ನು ಬದಿಗೊತ್ತಿ, ಅವರೇಪ್ರತ್ಯೇಕಕರಪತ್ರವನ್ನುಹೊರಡಿಸಿದ್ದಾರೆ. ಅದರಲ್ಲಿ ದೊಡ್ಡಾಘಟ್ಟಚಂದ್ರೇಶ್‌ರವರಹೆಸರನ್ನುಉದ್ದೇಶಪೂರ್ವಕವಾಗಿ ಕೈಬಿಟ್ಟು ತಾಲೂಕಿನಾದ್ಯಂತ ಕಾರ್ಯಕ್ರಮದ ಕುರಿತು ವ್ಯಾಪಕ ಪ್ರಚಾರ ಮಾಡುತ್ತಿದ್ದಾರೆಂದು ರಾಘವೇಂದ್ರ ಆರೋಪಿಸಿದರು.



ತುರುವೇಕೆರೆ ತಾಲೂಕು ಸೊರವನಹಳ್ಳಿಯಲ್ಲಿ ದೊಡ್ಡಾಘಟ್ಟ ಚಂದ್ರೇಶ್ ಅಭಿಮಾನಿಗಳು ಪತ್ರಿಕಾಗೋಷ್ಠಿ ನಡೆಸಿದರು.

ಹಾಲಿ ಶಾಸಕರಾಗಿರುವ ಎಂ.ಟಿ.ಕೃಷ್ಣಪ್ಪನವರು ಶಾಸಕರಾಗಲು ದೊಡ್ಡಾಘಟ್ಟ ಚಂದ್ರೇಶ್ ಕಾಯಾ, ವಾಚಾ, ಮನಸಾ ಹಗಲಿರುಳು ದುಡಿದಿದ್ದಾರೆ. ಅವರ ಗೆಲುವಿನಲ್ಲಿ ಚಂದ್ರೇಶ್ ರವರ ಪಾತ್ರವೂ ಪ್ರಮುಖವಾಗಿದೆ. ಹಲವಾರು ಬಾರಿ ಶಾಸಕ ಕೃಷ್ಣಪ್ಪನವರು ತಮ್ಮದು ಕೊನೇ ಚುನಾವಣೆ ಎಂದು ಹೇಳಿದ್ದರು. ಆ ವೇಳೆ ಕೃಷ್ಣಪ್ಪನವರೇ ದೊಡ್ಡಾಘಟ್ಟ ಚಂದ್ರೇಶ್ ರವರನ್ನು ಕಾರ್ಯಕರ್ತರ ಬಳಿ ಮುಂದಿನ ನಾಯಕ ಎಂದು ಪರಿಚಯಿಸಿದ್ದರು. ಈಗ ಅವರನ್ನು ಹಳಿಯುವ ಪ್ರಯತ್ನ ಮಾಡುತ್ತಿರುವುದು ಖಂಡನೀಯ. ಸಹಾಯ ಪಡೆದವರನ್ನು ತುಳಿಯಲು ಪ್ರಯತ್ನಿಸುವುದು ಸರಿಯಲ್ಲ. ಇದನ್ನು ಮುಂದುವರಿಸಬಾರದು ಎಂದುಕಿವಿ ಮಾತು ಹೇಳಿದರು. ಎಚ್.ಡಿ. ದೇವೇಗೌಡರುಮತ್ತು ಎಚ್.ಡಿ.ಕುಮಾರಸ್ವಾಮಿಯವರ ಕುಟುಂಬದ ಸದಸ್ಯರು ಯಾರೇ ಬಂದರೂ ಸಹ ಜನರು ಸ್ವಾಗತಿಸುತ್ತಾರೆ ರವಿ ಸುತ್ತಾರೆ. ತಾಲೂಕಿನ ಎಲ್ಲಾ ದೇವಾಲಯಗಳ ಉದ್ಘಾಟನೆಗೆ ಈರ್ವರೂ ಬಂದರೂ ನಾವು ಸ್ವಾಗತಿಸುತ್ತೇವೆ ಎಂದು ಅವರು ತಿಳಿಸಿದರು. ಈ ವೇಳೆ ಮುಖಂಡರಾದ ಸೊರವನ ಹಳ್ಳಿ ರವಿ ಕುಮಾರ್, ಪುನಿತ್, ದರ್ಶನ್, ಯತೀಶ್, ನಿಂಗೇಶ್, ರವೀಶ್, ಚೇತನ್, ಯೋಗೀಶ್, ಶಿವರಾಮು, ಮಂಜು ನಾಥ್, ಸುದರ್ಶನ್, ಉಮೇಶ್, ಜಗದೀಶ್, ಹೇಮಂತ್, ಅಜ್ಜೇಗೌಡ, ಗೌರೀಶ್ ಉಪಸ್ಥಿತರಿದ್ದರು.

ನೀರಿನ ಸಮಸ್ಯೆಯಾಗದಂತೆ ಕ್ರಮವಹಿಸಿ: ಡಾ.ರಂಗನಾಥ್



ತಾಪಂ ಸಭಾಂಗಣದಲ್ಲಿ ನೀರಿನ ಸಮಸ್ಯೆ ಕುರಿತು ಸಭೆ ನಡೆಸಿದ ಶಾಸಕ ಡಾ.ರಂಗನಾಥ್.

• **ಕನ್ನಡಪ್ರಭ ವಾರ್ತೆ** ಕುಣಿಗಲ್

ಕುಡಿಯುವ ನೀರಿನ ಸಮಸ್ಯೆ ತಕ್ಷಣ ಬಗೆಹರಿಸುವಂತೆ ಕುಣಿಗಲ್ ಶಾಸಕ ಡಾ.ರಂಗನಾಥ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ತಾಲೂಕು ಪಂಚಾಯಿತಿ ಸಭಾಂಗಣದಲ್ಲಿ ಕರೆದಿದ್ದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಭಾಗವಹಿಸಿ ಮಾತನಾಡಿದರು. ತಾಲೂಕಿನಲ್ಲಿ ಕುಡಿಯುವ ನೀರಿನ ಸಮಸ್ಯೆ ಹಿನ್ನೆಲೆಯಲ್ಲಿ ಹಲವಾರು ದೂರುಗಳು ಪ್ರತಿದಿನ ಬರುತ್ತವೆ. ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ತಕ್ಷಣ ಈ ಬಗ್ಗೆ ಕ್ರಮ ವಹಿಸಿ ಅವಶ್ಯಕತೆ ಇರುವಂತಹ ಸ್ಥಳಗಳಿಂದ ಶುದ್ಧ ನೀರನ್ನು ಸರಬರಾಜು ಟ್ಯಾಂಕರ್‌ಮುಖಾಂತರಮಾಡಬೇಕೆಂದರು.

ತಾಲೂಕಿನ36 ಗ್ರಾಮಪಂಚಾಯಿತಿಗಳಲ್ಲಿ ಉಂಟಾಗಿರುವ ಕುಡಿಯುವ ನೀರಿನ ಸಮಸ್ಯೆಗಳ ಕುರಿತು ಮಾಹಿತಿಯನ್ನು ಪಡೆದರು. ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಂದ ವಿವರವಾದ ಮಾಹಿತಿ ಪಡೆದುಕೊಳ್ಳಲಾಯಿತು. ಸಮಸ್ಯೆಗಳ ಪರಿಹಾರಕ್ಕಾಗಿ ಅಗತ್ಯ ಮಾರ್ಗದರ್ಶನ ನೀಡಿದರು. ತುರ್ತಾಗಿ ಕೈಗೊಳ್ಳಬೇಕಾದ ಕ್ರಮಗಳ ಕುರಿತು ಸೂಚನೆ ನೀಡಿದರು.

ಗ್ರಾಮಗಳಲ್ಲಿನ ಪ್ರತಿಯೊಂದು ಕುಟುಂಬಕ್ಕೂ ಸಕಾಲದಲ್ಲಿ ಶುದ್ಧ ಕುಡಿಯುವ ನೀರು ಲಭ್ಯವಾಗುವಂತೆ ಕ್ರಮಕೈಗೊಳ್ಳಬೇಕೆಂದರು. ಯಾವುದೇ ಗ್ರಾಮದಿಂದ ದೂರುಗಳು ಬಾರದಂತೆ ಮುನ್ನೆಚ್ಚರಿಕೆ ವಹಿಸಿ, ಸಮಸ್ಯೆಗಳು ಕಂಡುಬಂದ ಕೂಡಲೇ ಸ್ಪಂದಿಸುವಂತೆ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ನಿರ್ದೇಶನಗಳನ್ನು ನೀಡಿದರು. ಸಭೆಯಲ್ಲಿ ಕಾರ್ಯನಿರ್ವಾಹಕ ಅಧಿಕಾರಿ ವಸಂತ್‌ಕುಮಾರ್, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಇದ್ದರು.

ಮಣಕೀಕೆರೆ ಶಾಲೆಗೆ ಶೇ.100ರಷ್ಟು ಫಲಿತಾಂಶ

• **ಕನ್ನಡಪ್ರಭ ವಾರ್ತೆ** ತಿಪಟೂರು

ತಾಲೂಕಿನ ಹೊನ್ನವಳ್ಳಿ ಹೋಬಳಿಯ ಮಣಕೀಕೆರೆ ಗ್ರಾಮೀಣ ಪ್ರದೇಶದ ಭುವನೇಶ್ವರಿ ಪ್ರೌಢಶಾಲೆಗೆ ಈ ಬಾರಿಯ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ನೂರರಷ್ಟು ಫಲಿತಾಂಶ ಲಭಿಸಿದೆ. ವಿದ್ಯಾರ್ಥಿಗಳು ಅತ್ಯುತ್ತಮ ಸಾಧನೆ ಮಾಡಿದ್ದು, ಗ್ರಾಮೀಣ ಭಾಗದ ವಿದ್ಯಾರ್ಥಿಗಳ ಸಾಧನೆಗೆ ಸಾರ್ವಜನಿಕರು ಮತ್ತು ಪೋಷಕರು ಪ್ರಶಂಸೆ ವ್ಯಕ್ತಪಡಿಸಿದ್ದಾರೆ. ಪರೀಕ್ಷೆ ತೆಗೆದುಕೊಂಡಿದ್ದ 31 ವಿದ್ಯಾರ್ಥಿಗಳಲ್ಲಿ ಎಲ್ಲಾ ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದು, 11 ವಿದ್ಯಾರ್ಥಿಗಳು ಅತ್ಯುನ್ನತ ಶ್ರೇಣಿಯಲ್ಲಿ, 14 ವಿದ್ಯಾರ್ಥಿಗಳು ಪ್ರಥಮ ಶ್ರೇಣಿ, 04 ವಿದ್ಯಾರ್ಥಿಗಳು ದ್ವಿತೀಯ ದರ್ಜೆ ಶ್ರೇಣಿಯಲ್ಲಿ ಮತ್ತು ಇಬ್ಬರು ವಿದ್ಯಾರ್ಥಿಗಳು ಸಮಾನ್ಯ ದರ್ಜೆಯಲ್ಲಿ ಉತ್ತೀರ್ಣರಾಗಿದ್ದಾರೆ. ಶೇ. 90 ಕ್ಕಿಂತ ಹೆಚ್ಚು ಅಂಕ ಗಳಿಸಿದವರು: ಪುಷ್ಪಲತಾ ಎಂ.ಕೆ 601, ಕೀರ್ತಿ 585, ಚಂದು ಎ.ಆರ್. 577, ಲೇಖನ ಶೇ 91.68, ಚೇತನ ಕೆ.ಎಂ ಶೇ 91.2, ಮಾಲ ಎಚ್.ಜೆ ಶೇ 91.04 ಶ್ರೀ, ಅಭಿಷೇಕ ಶೇ 90.04, ಮತ್ತು ರಾಹುಲ್ ಎಂ.ಜೆ 90.01, ಪಡೆದಿದ್ದಾರೆ. ಶೇ.85ಕ್ಕಿಂತ ಹೆಚ್ಚು ಅಂಕ ಭೂಮಿಕಾ, ದೀಪಿಕಾ, ಆಶಾ, ಮನೋಜ್, ಅಂಕಿತ, ಚಿಕ್ಕಸ್ವಾಮಿ, ವರ್ಷ ಹೆಗಡೆ ಪಡೆದಿದ್ದಾರೆ. ವಿದ್ಯಾಸಂಸ್ಥೆ ಅಧ್ಯಕ್ಷ ರವಿ ಕುಮಾರ್, ಕಾರ್ಯದರ್ಶಿ ಅಮರ್‌ಸಿಂಗ್, ಮುಖ್ಯಶಿಕ್ಷಕಿ ಬಿ.ಆರ್. ಪವಿತ್ರ, ದೈಹಿಕ ಶಿಕ್ಷಕ ಎಚ್.ಎನ್.ಪ್ರಕಾಶ್ ಸೇರಿ ಪೋಷಕರು, ಸಿಬ್ಬಂದಿ ಅಭಿನಂದನೆ ಸಲ್ಲಿಸಿದ್ದಾರೆ.

ಮೂರು ರಾಜ್ಯಗಳ ಚುನಾವಣೆ ಗೆಲುವು: ತಿಪಟೂರಲ್ಲಿ ಬಿಜೆಪಿ ಸಂಭ್ರಮಾಚರಣೆ

ಸಿಂಗ್ರಿ ನಂಜಪ್ಪ ವೃತ್ತದಲ್ಲಿ ಪಟಾಕಿ ಸಿಡಿಸಿ ಸಿಹಿ ಹಂಚಿ ಸಂಭ್ರಮ



ವಿವಿಧ ರಾಜ್ಯಗಳಲ್ಲಿ ಬಿಜೆಪಿಗೆ ಗೆಲುವು ದೊರೆತ ಹಿನ್ನೆಲೆಯಲ್ಲಿ ತಿಪಟೂರು ಬಿಜೆಪಿ ಘಟಕದಿಂದ ಸಿಂಗ್ರಿ ನಂಜಪ್ಪ ವೃತ್ತದ ಬಳಿ ಸಂಭ್ರಮಾಚರಣೆ ನಡೆಸಲಾಯಿತು.

• **ಕನ್ನಡಪ್ರಭವಾರ್ತೆ** ತಿಪಟೂರು

ವಿವಿಧ ರಾಜ್ಯಗಳ ಚುನಾವಣೆಗಳಲ್ಲಿ ಬಿಜೆಪಿಗೆ ಅಭೂತಪೂರ್ವ ಗೆಲುವು ದೊರೆತ ಹಿನ್ನೆಲೆಯಲ್ಲಿ ತಾಲೂಕು ಬಿಜೆಪಿ ಘಟಕದಿಂದ ನಗರದ ಸಿಂಗ್ರಿ ನಂಜಪ್ಪ ವೃತ್ತದ ಬಳಿ ಪಟಾಕಿ ಸಿಡಿಸಿ ಸಿಹಿ ಹಂಚಿ ಸಂಭ್ರಮಾಚರಣೆ ನಡೆಸಲಾಯಿತು.

ಸಂಭ್ರಮಾಚರಣೆಯಲ್ಲಿ ಮಾತನಾಡಿದ ಮುಖಂಡರು ಬಿಜೆಪಿಗೆ ಇತಿಹಾಸದಲ್ಲಿಯೇ ಇದೊಂದು ಅಭೂತಪೂರ್ವವಾದ ದಿನ. ಮತದಾರರು ಅಭಿವೃದ್ಧಿಗೆ ಮಾತ್ರ ಬೆಂಬಲಿಸುತ್ತಾರೆ. ಅಭಿವೃದ್ಧಿ ಮಾಡದ ಸರ್ಕಾರಗಳನ್ನು ಸಹಿಸುವುದಿಲ್ಲ ಎಂಬುದು ಈ ಫಲಿತಾಂಶಗಳಿಂದ ವ್ಯಕ್ತವಾಗಿದೆ. ಪಶ್ಚಿಮ ಬಂಗಾಳ ಗೆಲುವಿಗೆ ಮುಖಂಡರು ಹಾಗೂ ಕಾರ್ಯಕರ್ತರ ಶ್ರಮ ಬಹಳಷ್ಟಿದೆ. ಸಹಸ್ರಾರು ಕಾರ್ಯಕರ್ತರ ಬಲಿದಾನದಿಂದ ಈ ಫಲಿತಾಂಶ ಬಂದಿದೆ. ರಾಜ್ಯದಲ್ಲಿಯೂ ಅಭಿವೃದ್ಧಿ ಮಾಡದ ಕೇವಲ ಭ್ರಷ್ಟಾಚಾರದಿಂದ ತುಂಬಿರುವ ಸರಕಾರ ಆಡಳಿತ ನಡೆಸುತ್ತಿದ್ದು ಜನರು ಈ ಸರಕಾರವನ್ನೂ ಕಿತ್ತೊಗೆಯುವ ದಿನಗಳು ದೂರವಿಲ್ಲ. ಐದು ರಾಜ್ಯಗಳಲ್ಲಿ ನಡೆದ ಚುನಾವಣೆಯ ಫಲಿತಾಂಶ ಬಂದಿದ್ದು ಮೂರು ರಾಜ್ಯಗಳಲ್ಲಿ ಬಿಜೆಪಿ ಅಧಿಕಾರಕ್ಕೆ ಬಂದಿದೆ ಎಂದರು.

ಈ ಸಂದರ್ಭದಲ್ಲಿ ತಾಲೂಕು ಘಟಕದ ಅಧ್ಯಕ್ಷ ಸತೀಶ್, ಪ್ರಸನ್ನಕುಮಾರ್, ರಾಮ್ ಮೋಹನ್, ಪದ್ಮತಿಮ್ಮೇಗೌಡ, ಜಿಲ್ಲಾ ಯುವಮೋರ್ಚಾ ಸದಸ್ಯ ವಿಶ್ವದೀಪು, ಮುಖಂಡರಾದಬಿಸಲೇಹಳ್ಳಿ ಜಗದೀಶ್, ಸಿಂಗ್ರಿ ದತ್ತಪ್ರಸಾದ್, ಜಗಜ್ಯೋತಿಲಿಂಗರಾಜು, ಗುಲಾಬಿ ಸುರೇಶ್, ಚೇತನ್, ಸತ್ಯಗಣಪತಿಸಂಘದಅಧ್ಯಕ್ಷಶ್ರೀಕಂಠ, ಸ್ವಾಮಿ, ದಿಲೀಪ್‌ಸೂಗೂರು, ಬಾಲರಾಜು, ಹರಿಬಾಬು, ಸ್ವಾಮಿ, ಮಂಜುನಾಥ್, ಸಿದ್ದೇಶ್, ಹರ್ಷ, ಸೇರಿದಂತೆ ನೂರಾರು ಕಾರ್ಯಕರ್ತರು ಹಾಜರಿದ್ದರು.

ಗ್ರಾಮಸ್ಥರ ಆಕ್ರೋಶ | ಸಮಾಲೋಚನಾ ಸಭೆಯಲ್ಲಿ ಅಧಿಕಾರಿಗಳ ನಿರ್ಧಾರಕ್ಕೆ ಒಕ್ಕೂರಲ ವಿರೋಧ

ನಾದೂರು ವ್ಯಾಪ್ತಿಯಲ್ಲಿ ಮಲತ್ಯಾಜ್ಯ ಸಂಸ್ಕರಣಾ ಘಟಕ ಬೇಡ

• **ಕನ್ನಡಪ್ರಭ ವಾರ್ತೆ** ಶಿರಾ

ಶಿರಾ ತಾಲೂಕಿನ ನಾದೂರು ಗ್ರಾಪಂ ವ್ಯಾಪ್ತಿಯಲ್ಲಿ ಮಲತ್ಯಾಜ್ಯ ಸಂಸ್ಕರಣಾ ಘಟಕ ಕಾಮಗಾರಿಯನ್ನು ಜನಾಭಿಪ್ರಾಯ ಪಡೆಯದೇ ಏಕಾಏಕಿ ಪ್ರಾರಂಭಿಸಿರುವುದು ಸರಿಯಲ್ಲ ಎಂದು ಮುಖಂಡ ಎನ್.ಇ. ಪರಮೇಶ್ ಆಕ್ರೋಶ ವ್ಯಕ್ತಪಡಿಸಿದರು.

ಶಿರಾ ತಾಲೂಕಿನ ನಾದೂರು ಗ್ರಾ.ಪಂ. ವ್ಯಾಪ್ತಿಯಲ್ಲಿ ಮಲತ್ಯಾಜ್ಯ ಸಂಸ್ಕರಣಾ ಘಟಕ ಕಾಮಗಾರಿ ಅನುಷ್ಠಾನಕ್ಕೆ ಸಂಬಂಧಿಸಿದಂತೆ ನಾದೂರುಸಮೀಪದನಂಜುಂಡೇಶ್ವರಕಲ್ಯಾಣ ಮಂಟಪದಲ್ಲಿ ಏರ್ಪಡಿಸಿದ್ದ ಸಮಾಲೋಚನಾ ಸಭೆಯಲ್ಲಿ ಮಾತನಾಡಿ ಸರ್ಕಾರದ ಯೋಜನೆಗೆ ನಮ್ಮ ವಿರೋಧವಿಲ್ಲ. ಆದರೆ ಅನುಷ್ಠಾನಕ್ಕೆ ತರಲು ಹೊರಟಿರುವ ಸ್ಥಳದ ಆಯ್ಕೆ ಸರಿ ಇಲ್ಲ. ಬದಲಾವಣೆ ಮಾಡಿ ಎಂಬುದಷ್ಟೇ ನಮ್ಮ ವಾದ ಎಂದರು.

ದಲಿತ ಮುಖಂಡ ದೇವರಾಜ್ ಮಾತನಾಡಿ ಶಿರಾ ತಾಲೂಕಿನ ಜೊತೆಗೆ ತುಮಕೂರಿನಿಂದ ಮಲ ತಂದು ಇಲ್ಲಿ ಸಂಸ್ಕರಣೆ ಮಾಡುವ ಅವಶ್ಯಕತೆ ಇಲ್ಲ. ಕಾಮಗಾರಿ ಅನುಷ್ಠಾನದ ಸ್ಥಳದ ಪಕ್ಕ ಕೆರೆ, ಆಶ್ರಯ ನಿವೇಶನ ಇದ್ದು ಸಾಧಕಬಾಧಕಗಳನ್ನುನೋಡದೆಯೋಜನೆಯ ಅನುಷ್ಠಾನ ಬೇಡ ಎಂದು ಒತ್ತಾಯಿಸಿದರು.

ಹಿಂದೂ ಸಂಘಟನೆಯ ಹರೀಶ್ ಮಾತನಾಡಿ, ಕಾಮಗಾರಿ ಆರಂಭದ ಮುಂಚೆ ಗ್ರಾಮಸ್ಥರ ಜೊತೆಗೆ ಚರ್ಚಿಸದೆ ಏಕಾಏಕಿ ತರಾತುರಿಯಲ್ಲಿ ಕಾಮಗಾರಿ ಆರಂಭದ ಹಿಂದೆ ಹುನ್ನಾರ ಅಡಗಿದೆ. ಮೂರು ದಿನಗಳಲ್ಲಿ ಜಾಗಹಸ್ತಾಂತರ ಪ್ರಕ್ರಿಯೆ ಮುಗಿದಿದೆ. ಇದನ್ನು ನೋಡಿದರೆ ಭ್ರಷ್ಟಾಚಾರ ನಡೆದಿದ್ದು ಈ ಬಗ್ಗೆ ಸರ್ಕಾರ ಕ್ರಮ ಕೈಗೊಳ್ಳಬೇಕು ಎಂದರು.



ಮಲತ್ಯಾಜ್ಯ ಸಂಸ್ಕರಣಾ ಘಟಕ ಕಾಮಗಾರಿ ಅನುಷ್ಠಾನಕ್ಕೆ ಬೇಡ ಎಂದು ತಾಪಂ ಕಾರ್ಯನಿರ್ವಾಹಕ ಅಧಿಕಾರಿ ಹರೀಶ್ ಅವರಿಗೆ ಗ್ರಾಮಸ್ಥರು ಮನವಿ ಸಲ್ಲಿಸಿದರು.

> ಮಲತ್ಯಾಜ್ಯ ಸಂಸ್ಕಾರಣಾ ಘಟಕ ನಿರ್ಮಾಣದ ಕುರಿತು ಗ್ರಾಮಸಭೆ ಮೂಲಕ ಗ್ರಾಮಸ್ಥರ ಗಮನಕ್ಕೆ ತರಬೇಕಿತ್ತು. ಕನಿಷ್ಠಪಕ್ಷ ಗ್ರಾಪಂನಲ್ಲಿಯಾದರೂ ಈ ಬಗ್ಗೆ ಹೇಳಬೇಕಿತ್ತು. ಆದರೆ ಅಧಿಕಾರಿಗಳು ಯಾವ ನಿಯಮಗಳನ್ನು ಸಹ ಪಾಲಿಸದೆ ಏಕಾಏಕಿ ಇಲ್ಲಿ ಸಂಸ್ಕರಣ ಘಟಕ ಸ್ಥಾಪಿಸುತ್ತಿರುವುದು ಸರಿಯಲ್ಲ. ಜೊತೆಗೆ ಈಗಿರುವ ಜಾಗವು ಸಹ ಸರಿಯಾದುದಲ್ಲ. ಇದರಿಂದ ಗ್ರಾಮಸ್ಥರಿಗೆ ತೊಂದರೆಯಾಗಲಿದ್ದು ಗ್ರಾಮಸ್ಥರೊಂದಿಗೆ ಚರ್ಚಿಸಿ ನಂತರ ಕಾಮಗಾರಿ ಆರಂಭಿಸಲಿ.
>
> • **ಸಭೆಯಲ್ಲಿ ಭಾಗವಹಿಸಿದ್ದ ಮುಖಂಡರು.**

ತಾ.ಪಂ.ಮಾಜಿ ಸದಸ್ಯ ಶ್ರೀನಿವಾಸ್ ಮಾತನಾಡಿ ಯೋಜನೆಯ ಆರಂಭದಲ್ಲಿಯೇ ನಾವು ಆಕ್ಷೇಪಣೆಗಳನ್ನು ಸೂಚಿಸಿ ಮನವಿ ಕೊಟ್ಟರು ಅರೆಬರೆ ಕೆಲಸಕ್ಕೆ 15 ಲಕ್ಷ ಬಿಲ್ ಪಾವತಿ ಮಾಡಿದ್ದಾರೆ. ಈ ಬಗ್ಗೆ ಸಂಬಂಧಪಟ್ಟ ಮೇಲಾಧಿಕಾರಿಗಳು ಕ್ರಮಕೈಗೊಳ್ಳಬೇಕೆಂದು ಆಗ್ರಹಿಸಿದರು.

ಸ್ಥಳದಲ್ಲಿದ್ದ ತಾಪಂ ಕಾರ್ಯನಿರ್ವಾಹಕ ಅಧಿಕಾರಿ ಹರೀಶ್ ಮಾತನಾಡಿ ನಿಮ್ಮ ಮನವಿಯನ್ನು ಆಲಿಸಿದ್ದು ಯೋಜನೆಯ ಅನುಷ್ಠಾನದಬಗ್ಗೆತಜ್ಞರಿಂದಮರುಪರಿಶೀಲನೆ ಮಾಡಿಸಿ ವರದಿ ಬಂದ ಬಳಿಕ ಸೂಕ್ತ ಕ್ರಮ ಕೈಗೊಳ್ಳುತ್ತೇವೆ. ಅಲ್ಲಿಯವರೆಗೂ ಕಾಮಗಾರಿ ಸ್ಥಗಿತಗೊಳಿಸಲಾಗುವುದು ಎಂದು ಸಭೆಯಲ್ಲಿ ಹೇಳಿದರು.

ಈ ಸಂದರ್ಭದಲ್ಲಿ ನಾದೂರು ಗ್ರಾ.ಪಂ. ಆಡಳಿತಾಧಿಕಾರಿ ರಾಜಣ್ಣ, ಪಿಡಿಒ ಮಹೇಶ್, ಕಾರ್ಯದರ್ಶಿ ತಿಪ್ಪೇಸ್ವಾಮಿ ಮುಖಂಡರಾದ ನಾಗಭೂಷಣ್ ಆರಾಧ್ಯ, ಮುರುಳಿ, ಮಹದೇವ್, ನವೀನ್, ಭೂತರಾಜ್, ಅಶೋಕ್, ಮಧುಸೂದನ್, ಕೆಂಚಪ್ಪ, ಈರಣ್ಣ ಕೃಷ್ಣಪ್ಪ, ಹೇಮಂತ್ ಸೇರಿದಂತೆ ಹಲವರು ಹಾಜರಿದ್ದರು.

ಸುದ್ದಿ ಸಿಂಚನ

ಸಂಕಷ್ಟಿ ವಿಶೇಷ ಪೂಜೆ



ಗುಬ್ಬಿ: ಪಟ್ಟಣದ ಇತಿಹಾಸ ಪ್ರಸಿದ್ಧ ಶ್ರೀ ಸತ್ಯಗಣಪತಿ ದೇವಾಲಯದಲ್ಲಿ ಸಂಕಷ್ಟ ಚತುರ್ಥಿ ಅಂಗವಾಗಿ ಮಂಗಳವಾರ ವಿಶೇಷವಾಗಿ ಪಿಸ್ತಾ, ದ್ರಾಕ್ಷಿ, ಬಾದಾಮಿ ಅಲಂಕಾರ ಮಾಡಲಾಯಿತು. ಬೆಳಿಗ್ಗೆ ಸ್ವಾಮಿಗೆ ಪಂಚಾಮೃತ ಅಭಿಷೇಕ, ರುದ್ರಾಭಿಷೇಕ ವಿಶೇಷ ಪೂಜೆಯೊಂದಿಗೆ ಸಾಯಂಕಾಲ ಭಕ್ತಾದಿಗಳ ಸಮ್ಮುಖದಲ್ಲಿ ಗಣಪತಿ ಹೋಮ, ನವಗ್ರಹ ಹೋಮ, ವಾಸ್ತು ಹೋಮ ವಿಶೇಷ ಪೂಜೆಯೊಂದಿಗೆ ಮಹಾ ಮಂಗಳಾರತಿ ನಡೆಯಿತು. ಬಂದ ಭಕ್ತಾದಿಗಳಿಗೆ ತೀರ್ಥ ಪ್ರಸಾದ ನೀಡಲಾಯಿತು.

ನೀರು ಪೂರೈಕೆ ವಿಳಂಬ ಪ್ರಶ್ನಿಸಿದ ದಲಿತರ ಮೇಲೆ ಹಲ್ಲೆ: ದೂರು ದಾಖಲು

ಪಾವಗಡ: ಬೇಸಿಗೆ ಅಭಾವ ಸೃಷ್ಟಿಯಾದ ಹಿನ್ನೆಲೆ ಕೊಳಾಯಿಗಳಿಂದ ಕುಡಿಯುವ ನೀರು ಪೂರೈಕೆ ವಿಳಂಬದ ವಿಚಾರವಾಗಿ ಪ್ರಶ್ನಿಸಿದ್ದಕ್ಕೆ ನೀರು ಗಂಟಿ ದಲಿತ ಮಹಿಳೆ ಮೇಲೆ ತಿರುಗಿಬಿದ್ದು ಹೀನಾಯನವಾಗಿ ನಿಂದಿಸಿ ಅವಹೇಳನ ಮಾಡಿದ ಘಟನೆ ಮಂಗಳವಾರ ತಾಲೂಕಿನ ಗ್ರಾಮಾಂತರ ರೊಪ್ಪ ಪಂಚಾಯಿತಿ ಟಿ. ಎನ್.ಪೇಟೆ ಗ್ರಾಮದಲ್ಲಿ ನಡೆದಿದೆ. 5ರಂದು ರಂದು ಸುಮಾರು 12-30ಗಂಟೆ ಸಮಯದಲ್ಲಿ ಟಿ.ಎನ್.ಪೇಟೆ ಗ್ರಾಮದಲ್ಲಿ ಗ್ರಾಮ ಪಂಚಾಯಿತಿ ವತಿಯಿಂದ ನೀರು ನಲ್ಲಿಗಳಿಗೆ ಬಿಡುತ್ತಿಲ್ಲ ಎಂದು ನೀರು ಗಂಟಿ ರಾಜು ನಾಯ್ಕ ಎನ್ನುವರನ್ನು ಇದೇ ಗ್ರಾಮದ ನಿಂಗಮ್ಮ ಎನ್ನುವರು ವಿಚಾರಿಸಿದ್ದಾರೆ. ಇದಕ್ಕೆ ಸರಿಯಾಗಿ ಮಾಹಿತಿ ನೀಡುವ ಬದಲು ಆಕೆಯನ್ನು ನಿಂದಿಸಿ ಅವಮಾನ ಪಡಿಸಿರುವುದಾಗಿ ಆರೋಪಿಸಿದ್ದಾರೆ. ಬಳಿಕ ಈ ಸಂಬಂಧ ವಿಷಯ ತಿಳಿಯುತ್ತಿದ್ದಂತೆ ನಿಂಗಮ್ಮ ಪತಿ ಪೆದ್ದಯ್ಯ ಸ್ಥಳಕ್ಕೆ ಆಗಮಿಸಿ ನೀರು ಗಂಟಿಯನ್ನು ವಿಚಾರಿಸಿದ್ದಾರೆ. ಈ ವೇಳೆ ಪೆದ್ದಯ್ಯನ ವಿರುದ್ಧ ತಿರುಗಿ ಬಿದ್ದ ನೀರು ಗಂಟಿ ಹಾಗೂ ಈತನ ಪುತ್ರ ಧರ್ಮಪಾಲ್ ನಾಯ್ಕ್ ಎನ್ನುವರು ಪೆದ್ದಯ್ಯನ ಮೇಲೆ ಗಲಾಟೆ ತೆಗೆದು ನಿಂದಿಸಿ ಎಡಗಡೆ ಕಣ್ಣಿಗೆ ಬಲವಾಗಿ ಗುದ್ದಿ ಗಾಯಗೊಳಿಸಿದ್ದಾರೆ. ಅವಾಚ್ಯ ಶಬ್ದಗಳಿಂದ ನಿಂದಿಸಿ ಚಪ್ಪಲಿ ಕಾಲಿನಿಂದ ಕಾಲಿಗೆ ಒದ್ದಿದ್ದಾರೆ. ತಂದೆ ಮಗ ಜೀವ ಬೆದರಿಕೆವೊಡ್ಡಿದ್ದಾರೆ. ಕುಡಿಯುವ ನೀರು ಕೇಳಿದರೆ ನಿಂದಿಸಿ ಹಲ್ಲೆ ಮಾಡಿದ್ದಾರೆಂದು ಆರೋಪಿಸಿ ಪಾವಗಡ ಪೊಲೀಸ್ ಠಾಣೆ ಹಾಗೂ ತಾಪಂ ಇಒ ಮದುಸೂದನ್ ಅವರಿಗೆ ನಿಂಗಮ್ಮನ ಪತಿ ಪೆದ್ದಯ್ಯ ದೂರು ಸಲ್ಲಿಸಿದ್ದಾರೆ.

8ರಂದು 31ಅಡಿ ಎತ್ತರದ ಮಾರುತಿ ಪ್ರತಿಮೆ ಲೋಕಾರ್ಪಣೆ

ತುರುವೇಕೆರೆ: ತಾಲೂಕಿನ ಕೋಡಿ ನಾಗಸಂದ್ರ ಟಿ ಬಿ ಕ್ರಾಸ್‌ನಲ್ಲಿ ಸುಮಾರು ಒಂದು ಕೋಟಿ ವೆಚ್ಚದಲ್ಲಿ ನಿರ್ಮಿಸಿರುವ ಶ್ರೀ ವಿನಾಯಕ ಮಾರುತಿ ದೇವಾಲಯದ ಉದ್ಘಾಟನೆ 8ರ ಶುಕ್ರವಾರದಂದು ನಡೆಯಲಿದೆ ಎಂದು ಶ್ರೀ ವಿನಾಯಕ ಮಾರುತಿ ದೇವಾಲಯ ಸಮಿತಿ ಅಧ್ಯಕ್ಷ ಎನ್.ಲೋಕೇಶ್ ತಿಳಿಸಿದ್ದಾರೆ. ಪತ್ರಕರ್ತರೊಂದಿಗೆ ಮಾತನಾಡಿದ ಅವರು ಶ್ರೀ ವಿನಾಯಕ, ಮಾರುತಿ ದೇವರುಗಳ ವಿಗ್ರಹಗಳ ಪ್ರತಿಷ್ಠಾಪನೆ, ವಿಮಾನಗೋಪುರ ಕಳಸ ಸ್ಥಾಪನೆ ಮತ್ತು ಮಾರುತಿ ಸ್ವಾಮಿಯವರ 31 ಅಡಿ ಎತ್ತರದ ಪ್ರತಿಮೆಯ ಅನಾವರಣಾ ಕಾರ್ಯಕ್ರಮದ ಸಲುವಾಗಿ 7 ರಂದು ಗುರುವಾರ ಬೆಳಗ್ಗೆ ಧ್ವಜಾರೋಹಣ, ಮಹಾಗಣಪತಿ ಪ್ರಾರ್ಥನೆ, ಗಂಗಾಪೂಜೆ, ಹೋಮಗಳು, ಪುಣ್ಯಾವಾಚನ, ಪೂರ್ಣಾಹುತಿ ನಂತರ ಮಹಾಮಂಗಳಾರತಿ ಮತ್ತು ಪ್ರಸಾದ ವಿನಿಯೋಗ ನಡೆಯಲಿದೆ. 8ರ ಶುಕ್ರವಾರದಂದು ಕುಂಭಾಭಿಷೇಕದ ದಿವ್ಯ ಸಾನಿಧ್ಯವನ್ನು ಆದಿಚುಂಚನಗಿರಿ ಮಹಾ ಸಂಸ್ಥಾನ ಮಠದ ಪೀಠಾಧ್ಯಕ್ಷರಾದ ಶ್ರೀ.ಡಾ.ನಿರ್ಮಲಾನಂದನಾಥ ಸ್ವಾಮೀಜಿಯವರು ಮತ್ತು ಕಾರ್ಯದರ್ಶಿ ಪ್ರಸನ್ನನಾಥ ಸ್ವಾಮೀಜಿ ವಹಿಸಲಿದ್ದಾರೆ. ಲೋಕಸಭಾ ಸದಸ್ಯರಾದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಕಾರ್ಯಕ್ರಮದ ಉದ್ಘಾಟನೆಯನ್ನು ನೆರವೇರಿಸುವರು. ಕಾರ್ಯಕ್ರಮಕ್ಕೆ ಕೇಂದ್ರದ ಉಕ್ಕು ಮತ್ತು ಬೃಹತ್ ಕೈಗಾರಿಕಾ ಸಚಿವ ಎಚ್.ಡಿ.ಕುಮಾರಸ್ವಾಮಿ, ಕೇಂದ್ರದ ರೈಲ್ವೆ ಮತ್ತು ಜಲಶಕ್ತಿ ರಾಜ್ಯ ಖಾತೆ ಸಚಿವರಾದ ವಿ. ಸೋಮಣ್ಣ, ಯುವ ಜೆಡಿಎಸ್ ನ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಆಗಮಿಸುವರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶಾಸಕ ಎಂ.ಟಿ.ಕೃಷ್ಣಪ್ಪ ವಹಿಸುವರು ಎಂದು ಅವರು ತಿಳಿಸಿದರು.ಪತ್ರಿಕಾಗೋಷ್ಠಿಯಲ್ಲಿ ಸಮಿತಿಯ ಉಪಾಧ್ಯಕ್ಷರಾದ ಕೆ.ರಘು, ಹನುಮಂತರಾಜು, ಕಾರ್ಯದರ್ಶಿ ಜಿ.ಡಿ.ಗಂಗಾಧರಯ್ಯ, ಖಜಾಂಚಿ ಎಸ್.ಎನ್. ಚಂದ್ರಶೇಖರಯ್ಯ, ಸದಸ್ಯರಾದ ನಂಜುಂಡಯ್ಯ, ವೈ.ಮಂಜುನಾಥ್, ಪಿ.ನಾಗೇಶ್, ಸ್ವಾಮಿ, ಎಂ.ಕೆ. ಶಿವಣ್ಣ, ಕೆ.ಎಲ್.ಲೋಕೇಶ್, ಎಸ್.ಪಿ.ಶಿವಣ್ಣ, ಎಸ್. ಎನ್.ರಾಮಚಂದ್ರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಕ್ರೀಡಾನಗರಿಯಾಗಿ ತುಮಕೂರು ಅಭಿವೃದ್ಧಿ

ಐಟಿಎಫ್‌ಡಬ್ಲ್ಯು 35 ರ್‍ಯಾಂಕಿಂಗ್ ತುಮಕೂರು ಓಪನ್ ಟೂರ್ನಿಗೆ ವಿಧ್ಯುಕ್ತ ಚಾಲನೆ ನೀಡಿದ ಗೃಹ ಸಚಿವ ಡಾ.ಜಿ.ಪರಮೇಶ್ವರ್

• **ಕನ್ನಡಪ್ರಭ ವಾರ್ತೆ,** ತುಮಕೂರು

ಕಲ್ಪತರುನಾಡು ತುಮಕೂರು ನಗರದಲ್ಲಿ ಮೇ 10 ರವರೆಗೆ ಆಯೋಜಿಸಲಾಗಿರುವ ಐಟಿಎಫ್ ಡಬ್ ಲ್ಯೂ 35 ರ್‍ಯಾಂಕಿಂಗ್ ತುಮಕೂರು ಓಪನ್ ಟೂರ್ನಿಗೆ ವಿದ್ಯುಕ್ತ ಚಾಲನೆ ದೊರೆಯಿತು.

ತುಮಕೂರು ವಿವಿ ಆವರಣದಲ್ಲಿ ನಿರ್ಮಿಸಲಾಗಿರುವ ವಿಶ್ವ ದರ್ಜೆಯ ಟೆನ್ನಿಸ್ ಅಂಕಣದಲ್ಲಿ ಕರ್ನಾಟಕ ರಾಜ್ಯ ಅಥ್ಲೆಟಿಕ್ ಅಸೋಸಿಯೇಷನ್ ಅಧ್ಯಕ್ಷ ಹಾಗೂ ಗೃಹ ಸಚಿವ ಡಾ. ಜಿ. ಪರಮೇಶ್ವರ್ ಅವರು ಬಲೂನ್‌ಗಳನ್ನು ಹಾರಿ ಬಿಡುವ ಮೂಲಕ ಈ ಅಂತಾರಾಷ್ಟ್ರೀಯ ಮಹಿಳಾ ಓಪನ್ ಟೆನ್ನಿಸ್ ಕ್ರೀಡಾಕೂಟವನ್ನು ಉದ್ಘಾಟಿಸಿದರು.

ಈ ವೇಳೆ ಮಾತನಾಡಿದ ಗೃಹ ಸಚಿವ ಡಾ. ಪರಮೇಶ್ವರ್, ತುಮಕೂರು ಎಲ್ಲ ರೀತಿಯಲ್ಲೂ ವೇಗವಾಗಿ ಬೆಳೆಯುತ್ತಿರುವ ನಗರ. ಹಾಗಾಗಿ ತುಮಕೂರನ್ನು ಕ್ರೀಡೆಯಲ್ಲೂ ವಿಶ್ವ ದರ್ಜೆ ಮಟ್ಟಕ್ಕೆ ಕೊಂಡೊಯ್ಯುವುದು ತಮ್ಮ ಕನಸಾಗಿದೆ. ರಾಜ್ಯ ಮತ್ತು ದೇಶದಲ್ಲಿ ತುಮಕೂರು ನಗರ ಕ್ರೀಡಾನಗರಿಯಾಗಿ ಅಭಿವೃದ್ಧಿ ಹೊಂದಬೇಕು ಎಂಬ ಉದ್ದೇಶದಿಂದ ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಕ್ರೀಡಾಕೂಟಗಳನ್ನು ಆಯೋಜಿಸಲಾಗುತ್ತಿದೆ. ಕ್ರೀಡೆಗೆ ಅಗತ್ಯವಾಗಿ ಬೇಕಾಗಿರುವ ಕ್ರೀಡಾಂಗಣ ಸೇರಿದಂತೆ ಎಲ್ಲಾ ಮೂಲ ಸೌಕರ್ಯಗಳನ್ನು ಒದಗಿಸುವ ಕೆಲಸ ಮಾಡಲಾಗಿದೆ. ರಾಜಕಾರಣವೂ ಒಂದು ರೀತಿಯ ಕ್ರೀಡೆ ಇದ್ದಂತೆ. ರಾಜಕಾರಣದಲ್ಲಿ ದೈಹಿಕವಾಗಿ ಕ್ರೀಡೆ ಆಡದಿದ್ದರೂ ಮಾನಸಿಕವಾಗಿ ಸದಾ ಕ್ರೀಡಾ ಚಟುವಟಿಕೆಯಿಂದ ಕೂಡಿರಬೇಕು ಎಂದು ಅವರು ತಿಳಿಸಿದರು.

ಕನ್ನಿಕಾ ಪರಮೇಶ್ವರ್‌ಮಾತನಾಡಿ, ಟೆನ್ನಿಸ್ ಕ್ರೀಡೆ ಅಷ್ಟು ಸುಲಭವದ ಆಟವಲ್ಲ. ಈ ಕ್ರೀಡೆಯಲ್ಲಿ ಪಾಲ್ಗೊಳ್ಳುವವರು ದೈಹಿಕ ಹಾಗೂ ಮಾನಸಿಕವಾಗಿ ಸದೃಢರಾಗಿರುವ ಜತೆಗೆ ಏಕಾಗ್ರತೆ ಬಹು ಮುಖ್ಯವಾಗಿದೆ ಎಂದರು.

ಶಾಸಕರಾದ ಸುರೇಶ್‌ಗೌಡ, ಜ್ಯೋತಿಗಣೇಶ್ ಹಾಗೂ ಸಿ.ಬಿ. ಸುರೇಶ್ ಬಾಬು ಅವರು ಮಾತನಾಡಿ, ತುಮಕೂರು ಜಿಲ್ಲೆ ಹಾಗೂ ನಗರವನ್ನು ಶಿಕ್ಷಣದ ಹಬ್ ಜತೆಗೆ ಕ್ರೀಡಾ ಹಬ್ ಆಗಿಯೂ ಬೆಳೆಸುವುದು ಗೃಹ ಸಚಿವ ಡಾ. ಜಿ. ಪರಮೇಶ್ವರ್ ರವರ ಕನಸಾಗಿದೆ. ಇದಕ್ಕೆ ನಮ್ಮೆಲ್ಲರ ಸಹಕಾರ ಸದಾ ಇದ್ದೇ ಇರುತ್ತದೆ ಎಂದರು.

ಈ ವೇಳೆ ಶಾಸಕರಾದ ಗೋವಿಂದರಾಜು, ಬಿಎಂಟಿಸಿ ಉಪಾಧ್ಯಕ್ಷ ನಿಕೇತ್ ರಾಜ್ ಕಪೂರ್, ತುಮಕೂರು ವಿವಿ ಕುಲಪತಿ ಪ್ರೊ. ಎಂ. ವೆಂಕಟೇಶ್ವರಲು, ಸುಶಾನ್ ಕಪೂರ್, ಸುಪ್ರೀತ್, ಅಮರನಾಥ್, ಜಿಲ್ಲಾಧಿಕಾರಿ ಶುಭಕಲ್ಯಾಣ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ವಿ. ಅಶೋಕ್, ಜಿ.ಪಂ. ಸಿಇಒ ಬಿ.ವಿ. ಅಶ್ವಿಜ, ನಿವೃತ್ತ ಐಎಎಸ್ ಅಧಿಕಾರಿ ಎಂ.ಬಿ. ದ್ಯಾಬೇರಿ ಉಪಸ್ಥಿತರಿದ್ದರು.



ತುಮಕೂರು ನಗರದಲ್ಲಿ ಮೇ 10 ರವರೆಗೆ ಆಯೋಜಿಸಲಾಗಿರುವ ಐಟಿಎಫ್ ಡಬ್ಲ್ಯು 35 ರ್‍ಯಾಂಕಿಂಗ್ ತುಮಕೂರು ಓಪನ್ ಟೂರ್ನಿಗೆ ಕರ್ನಾಟಕ ರಾಜ್ಯ ಅಥ್ಲೆಟಿಕ್ ಅಸೋಸಿಯೇಷನ್ ಅಧ್ಯಕ್ಷ ಹಾಗೂ ಗೃಹ ಸಚಿವ ಡಾ. ಜಿ. ಪರಮೇಶ್ವರ್ ಬಲೂನ್‌ಗಳನ್ನು ಹಾರಿ ಬಿಡುವ ಮೂಲಕ ಚಾಲನೆ ನೀಡಿದರು.

ಟಿವಿಕೆಗೂ ತುರುವೇಕೆರೆಗೂ ರಾಜಕೀಯ ನಂಟು

ಮೆಟ್ಟುಪಾಳ್ಯಂನಲ್ಲಿ ಟಿವಿಕೆ ಪಕ್ಷದಿಂದ ಸ್ಪರ್ಧಿಸಿ ಗೆದ್ದಿರುವ ಸುನಿಲ್ ಆನಂದ ಮೂಲತಃ ತುರುವೇಕರೆಯವರು

• **ನಾಗಭೂಷಣ**
ಕನ್ನಡಪ್ರಭ ವಾರ್ತೆ ತುರುವೇಕೆರೆ

ತಮಿಳುನಾಡಿನಲ್ಲಿ ಅದ್ವಿತೀಯ ಸಾಧನೆ ತೋರಿದ ನಟ ವಿಜಯ್ ರ ಪಕ್ಷ ತಮಿಳು ವೆಟ್ರಿ ಕಳಗಂ (ಟಿವಿಕೆ) ಗೂ ತುರುವೇಕೆರೆ (ಟಿವಿಕೆ) ಗೂ ಈಗ ರಾಜಕೀಯ ನಂಟು ಬೆಳೆದಿದೆ.

ತಮಿಳುನಾಡಿನಲ್ಲಿ ಟಿವಿಕೆ ಸುಮಾರು 107 ಸ್ಥಾನಗಳಲ್ಲಿ ಜಯಭೇರಿ ಗಳಿಸಿದೆ. ರಾಜ್ಯದ ಅತಿ ಹೆಚ್ಚು ಸ್ಥಾನ ಪಡೆದು ಪ್ರಧಾನ ಪಕ್ಷವಾಗಿದೆ. ಈ ಪಕ್ಷದಲ್ಲಿ ಶಾಸಕರಾಗಿರುವವರಲ್ಲಿ ಒಬ್ಬರು ನಮ್ಮ ತಾಲೂಕಿನ ಕುಡಿ ಸುನೀಲ್ ಆನಂದ್ ಸಹ ಒಬ್ಬರು. ತಮಿಳುನಾಡಿನ ಮೆಟ್ಟುಪಾಳ್ಯಂನ ವಿಧಾನಸಭಾ ಕ್ಷೇತ್ರದಿಂದ ಟಿವಿಕೆ ಪಕ್ಷದಿಂದ ಸ್ಪರ್ಧಿಸಿದ್ದ ಸುನೀಲ್ ಆನಂದ್ ರವರ ಅಜ್ಜನ ಊರು ತಾಲೂಕಿನ ದಬ್ಬೇಘಟ್ಟ ಹೋಬಳಿಯ ಹೊಡಿಕೇಘಟ್ಟ. ಹಲವು ದಶಕಗಳ ಹಿಂದೆ ನಿಂಗೇಗೌಡರು ತಮಿಳುನಾಡಿಗೆ ವಲಸೆ ಹೋಗಿದ್ದರು. ತದ ನಂತರದ ದಿನಗಳಲ್ಲಿ ಅಲ್ಲೇ ತಮ್ಮ ಜೀವನ ಸಾಗಿಸಿದರು. ನಿಂಗೇಗೌಡರ ಮಗ ಎಚ್.ಎನ್.ನಾಗರಾಜು ರವರ ಮಗನೇ ಈಗ ಮೇಟಿಪಾಳ್ಯಂ ನ ಶಾಸಕರಾಗಿರುವ ಸುನಿಲ್ ಆನಂದ್.

ಸುನಿಲ್ ಆನಂದ್ ಹೋಟೆಲ್ ಸೇರಿದಂತೆ ವಿವಿಧ ವ್ಯವಹಾರಗಳ ಉದ್ಯಮಿಯಾಗಿದ್ದಾರೆ. ಸುನಿಲ್ ಆನಂದ್ ಗ್ರಾಮದಲ್ಲಿ ನಡೆಯುವ ಹಲವಾರು ಧಾರ್ಮಿಕ ಕಾರ್ಯಕ್ರಮಗಳು ಹಾಗೂ ಸಂಬಂಧಿಗಳ ಕಾರ್ಯಕ್ರಮಗಳಿಗೆ ಭಾಗವಹಿಸುವರು ಎಂದು ಸುನಿಲ್ ಆನಂದ್ ಗೆ ಸಂಬಂಧಿಕರೂ ಆಗಿರುವ ಇಲ್ಲಿಯ ಮಾಜಿ ಶಾಸಕ ಎಚ್.ಬಿ.ನಂಜೇಗೌಡ ತಿಳಿಸಿದ್ದಾರೆ. ಸುನಿಲ್ ರವರ ತಾಯಿಯ ತಂದೆಯವರಾದ ಲಿಂಗಪ್ಪನವರು ಮೈಸೂರಿನ ಮೇಯರ್‌ಆಗಿ ಸೇವೆ ಸಲ್ಲಿಸಿದ್ದರು. ಅವರ ಸ್ಮರಣಾರ್ಥ ಮೈಸೂರಿನ ಒಂಟಿಕೊಪ್ಪಲ್ ಬಳಿಮೇಯರ್‌ಲಿಂಗಪ್ಪವೃತ್ತವನ್ನುನಿರ್ಮಿಸಲಾಗಿದೆ ಎಂದೂ ಸಹ ತಿಳಿಸಿದ್ದಾರೆ. ಒಟ್ಟಿನಲ್ಲಿ ಸುನಿಲ್ ಆನಂದ್ ರವರಿಗೆ ರಾಜಕೀಯ ಕ್ಷೇತ್ರದ ನಂಟಿದೆ. ಸುನಿಲ್ ಆನಂದ್ ರವರು ಪ್ರಥಮ ಪ್ರಯತ್ನದಲ್ಲೇ ಶಾಸಕರಾಗಿದ್ದಾರೆ. ಟಿವಿಕೆ ಪಕ್ಷದ ನಾಯಕ ವಿಜಯ್ ರವರೊಂದಿಗೆ ಉತ್ತಮ ಬಾಂಧವ್ಯ ಸಹ ಇದೆ. ವಿಜಯ್ ರವರ ಮಂತ್ರಿ ಮಂಡಲದಲ್ಲಿ ಮಂತ್ರಿಯಾಗುವ ಯೋಗವೂ ಇದೆ ಎಂಬ ಭರವಸೆ ಇದೆ ಎಂಬ ವಿಶ್ವಾಸವನ್ನು ವ್ಯಕ್ತಪಡಿಸಿದ್ದಾರೆ.

ಹಾಗೇನಾದರೂ ವಿಜಯ್ ರವರ ಸಚಿವ ಸಂಪುಟದಲ್ಲಿ ಸುನಿಲ್ ಆನಂದ್ ಮಂತ್ರಿ ಆದರೆ ತಾಲೂಕಿನ ಕುಡಿಯೊಂದು ಬೇರೊಂದು ರಾಜ್ಯದಲ್ಲಿ ಮಂತ್ರಿ ಆದ ಹೆಮ್ಮೆ ಆಗುತ್ತದೆ. ಅಲ್ಲದೇ ನಮ್ಮ ತಾಲೂಕಿನಲ್ಲಿ ಕಳೆದ ಐವತ್ತು ಅರವತ್ತು ವರ್ಷಗಳ ಹಿಂದೆತಾಳಕೆರೆಸುಬ್ರಹ್ಮಣ್ಯಂರವರುಸಚಿವರಾಗಿದ್ದು ಬಿಟ್ಟರೆ ಇವತ್ತಿನವರೆಗೂ ಯಾರೊಬ್ಬರೂ ಮಂತ್ರಿ ಆಗಿಲ್ಲ. ಸುನಿಲ್ ಆನಂದ್ ಮಂತ್ರಿ ಆದರೆ 50-60 ವರ್ಷಗಳ ನಂತರ ನಮ್ಮ ತಾಲೂಕಿನವರೊಬ್ಬರು ಬೇರೊಂದು ರಾಜ್ಯದ ಮಂತ್ರಿ ಆದರು ಎಂಬ ಸಂತೋಷ ಮನೆ ಮಾಡಲಿದೆ.



ಎಲ್ಲರನ್ನೂ ಪ್ರೀತಿಯಿಂದ ಕಾಣುವ ಗುಣವಿರಲಿ: ನಂಜಾವಧೂತ ಶ್ರೀ



ಶಿರಾ ತಾಲೂಕಿನ ಹೊಸಹಳ್ಳಿ ಗ್ರಾಮದ ಶ್ರೀ ಅಂಬಾದೇವಿ ಅಮ್ಮನವರ 20ನೇ ವಾರ್ಷಿಕೋತ್ಸವ ಸಮಾರಂಭದ ಲ್ಲಿ ಶ್ರೀ ನಂಜಾವಧೂತ ಸ್ವಾಮೀಜಿಗಳು ಭಾಗವಹಿಸಿದ್ದರು.

• **ಕನ್ನಡಪ್ರಭ ವಾರ್ತೆ** ಶಿರಾ

ಜಗತ್ತಿನ ಚರಾಚರ ವಸ್ತುಗಳಲ್ಲಿ ಭಗವಂತನನ್ನು ಕಾಣುತ್ತಿದ್ದೇನೆ ಎಂಬ ಭಾವನೆ ಬಂದರೆ ಮನುಷ್ಯನಿಗೆ ಯಾವುದು ಬೇಕಿಲ್ಲ. ಒಳ್ಳೆಯ ಕೆಲಸವನ್ನು ಮಾಡುವ ಎಲ್ಲರನ್ನೂ ಪ್ರೀತಿಯಿಂದ ಕಾಣುವ ಗುಣ ಜೀವನದಲ್ಲಿ ಯಶಸ್ಸು ನೆಮ್ಮದಿ ನೀಡಲಿದೆ ಎಂದು ಸ್ಪಟಿಕಪುರಿ ಮಹಾ ಸಂಸ್ಥಾನ ಮಠದ ಪೀಠಾಧ್ಯಕ್ಷರಾದ ಶ್ರೀ ನಂಜಾವಧೂತ ಸ್ವಾಮೀಜಿ ಹೇಳಿದರು.

ಅವರು ಶಿರಾ ತಾಲೂಕಿನ ಹುಲಿಕುಂಟೆ ಹೋಬಳಿಯ ಹೊಸಹಳ್ಳಿ ಗ್ರಾಮದ ಪ್ರಸಿದ್ಧ ಶ್ರೀ ಅಂಬಾದೇವಿ ಅಮ್ಮನವರ 20ನೇ ವರ್ಷದ ವಾರ್ಷಿಕೋತ್ಸವ ಸಮಾರಂಭದ ಅಂಗವಾಗಿ ಏರ್ಪಡಿಸಿದ್ದ ಲೋಕ ಕಲ್ಯಾಣಾರ್ಥ ಹೋಮ ಪೂರ್ಣಾಹುತಿ ಧಾರ್ಮಿಕ ಕಾರ್ಯಕ್ರಮದಲ್ಲಿ ದಿವ್ಯ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದರು. ಬಲಿಷ್ಠ ರಾಷ್ಟ್ರಗಳು ಯುದ್ಧ ಮಾಡುತ್ತಿದ್ದರು, ಭಾರತೀಯರಲ್ಲಿರುವ ಆತ್ಮವಿಶ್ವಾಸದ ಬದುಕು, ಭಗವಂತ ಮೇಲೆ ಇಟ್ಟಿರುವ ಅಚಲ ನಂಬಿಕೆ ಭರತ ಖಂಡದ ರಕ್ಷಣೆ ಮಾಡುತ್ತಿದೆ. ಜಗತ್ತಿನ ಎಲ್ಲಾ ದುಷ್ಟಶಕ್ತಿಗಳನ್ನು ಸಂಹರಿಸಲು ಬ್ರಹ್ಮಶಕ್ತಿ, ಶಿವಶಕ್ತಿ, ವಿಷ್ಣುಶಕ್ತಿ ಎಲ್ಲ ಒಗ್ಗೂಡಿ ಆದಿಶಕ್ತಿ ರೂಪ ತಾಳಿ ಜಗತ್ತಿನ ಕಂಟಕ ದೂರ ಮಾಡಿದ ಶಕ್ತಿ ಆದಿಶಕ್ತಿಗೆ ಸಲ್ಲುತ್ತದೆ. ಹೊಸಹಳ್ಳಿ ಶ್ರೀ ಅಂಬಾದೇವಿ ಶಕ್ತಿ ದೇವತೆಯಾಗಿದ್ದು ಭಕ್ತರ ಇಷ್ಟಾರ್ಥ ಈಡೇರಿಸುವ ಸುಕ್ಷೇತ್ರವಾಗಿ ರೂಪುಗೊಂಡಿದೆ. ಆದಿಶಕ್ತಿ ನಾಡಿನ ರೈತ ಹಾಗೂ ಜನಸಾಮಾನ್ಯರ ಜೀವನದಲ್ಲಿ ಸುಭಿಕ್ಷೆ ಕರುಣಿಸಿ, ನೆಮ್ಮದಿ ಆರೋಗ್ಯ ನೀಡಲಿ ಎಂದರು.

ಜಿಲ್ಲಾ ಪಂಚಾಯಿತಿ ಮಾಜಿ ಉಪಾಧ್ಯಕ್ಷ ಮುದಿಮಡು ರಂಗಸ್ವಾಮಿ ಮಾತನಾಡಿ ಹೊಸಹಳ್ಳಿಯಲ್ಲಿ ನೆಲೆಗೊಂಡಿರುವ ಶ್ರೀ ಅಂಬಾದೇವಿ ಭಕ್ತರ ಕಷ್ಟ ಕಾರ್ಪಣ್ಯಗಳನ್ನು ದೂರಮಾಡುವ ಶಕ್ತಿ ದೇವತೆ. ಅತ್ಯಂತ ಕಿರಿಯ ವಯಸ್ಸಿನಲ್ಲಿ ನಂಜಾವಧೂತ ಶ್ರೀಗಳು ನೀರಾವರಿ ಮತ್ತು ರೈತರ ಬಗ್ಗೆ ಇಟ್ಟಿರುವ ಕಾಳಜಿ ಮೆಚ್ಚುವಂತಹದ್ದು, ಶಿರಾ ಭಾಗಕ್ಕೆ ಹೇಮಾವತಿ ನೀರು ಹರಿಯಲು ಶ್ರೀಗಳ ನೀರಾವರಿ ಹಾಕ್ಕೋತ್ತಾಯ ದಿನ ಪ್ರೇರಣೆ ಎಂದರು.

ಶ್ರೀ ಅಂಬಾ ದೇವಿ ದೇವಸ್ಥಾನದ ಪ್ರಧಾನ ಅರ್ಚಕ ಎಚ್.ಎಂ. ಶಶಿಧರ, ಹೊಸಹಳ್ಳಿ ಗ್ರಾಮ ಪಂಚಾಯತಿ ಮಾಜಿ ಅಧ್ಯಕ್ಷ ಟಿ.ರಾಮಚಂದ್ರಪ್ಪ, ಮುಖಂಡ ಸಿದ್ದಲಿಂಗಪ್ಪ, ಪ್ರವೀಣ್ ಹುಲಿಕುಂಟೆ, ಸೋಮಶೇಖರ್, ನಟರಾಜು, ಪರಮೇಶ್, ಮಂಜುನಾಥ್, ಲಿಂಗೇಗೌಡ, ಕ್ಯಾದಿಗುಂಟೆ ಮುದ್ದರಾಜು ಹಾಜರಿದ್ದರು.

ರಾಜ್ಯದಲ್ಲಿ ಜನಪರವಾದ ಮೈತ್ರಿ ಸರ್ಕಾರ ಅಧಿಕಾರಕ್ಕೆ ತನ್ನಿ

ಮುಳುಕುಂಟೆ ಚೌಡೇಶ್ವರಿ ಜಾತ್ರೆಯಲ್ಲಿ ಕೇಂದ್ರ ಉಕ್ಕು ಮತ್ತು ಭಾರಿ ಕೈಗಾರಿಕಾ ಸಚಿವ ಎಚ್.ಡಿ.ಕುಮಾರಸ್ವಾಮಿ

• **ಕನ್ನಡಪ್ರಭ ವಾರ್ತೆ** ತುಮಕೂರು

ರಾಜ್ಯದ ಈಗಿನ ಸರ್ಕಾರದ ಆಡಳಿತಕ್ಕೆ ಜನ ಬೇಸತ್ತಿದ್ದಾರೆ. ಮುಂದಿನ ದಿನಗಳಲ್ಲಿ ರಾಜ್ಯದಲ್ಲಿ ಬಿಜೆಪಿ ಮತ್ತು ಜೆಡಿಎಸ್ ಮೈತ್ರಿಯ ಜನಪರವಾದ, ಜನರಿಗೆ ಗೌರವ ತರುವಂತಹ ಸರ್ಕಾರ ತರಲು ರಾಜ್ಯದ ಜನರು ಆಶೀರ್ವಾದ ಮಾಡಬೇಕು ಎಂದು ಕೇಂದ್ರ ಉಕ್ಕು ಮತ್ತು ಭಾರಿ ಕೈಗಾರಿಕಾ ಸಚಿವ ಎಚ್.ಡಿ. ಕುಮಾರಸ್ವಾಮಿ ಮನವಿ ಮಾಡಿದರು.

ತುಮಕೂರುತಾಲೂಕುಮುಳಕುಂಟೆಗ್ರಾಮದಲ್ಲಿ ಮಂಗಳವಾರ ನಡೆದ ವಿಜಯ ಚೌಡೇಶ್ವರಿ ದೇವಿ ಜಾತ್ರಾ ಮಹೋತ್ಸವದಲ್ಲಿ ಭಾಗವಹಿಸಿದ ಅವರು, ದೇವಿಯ ದರ್ಶನ ಮಾಡಿ ಪೂಜೆ ಸಲ್ಲಿಸಿ, ನಂತರ ನಡೆದ ಸಮಾರಂಭದಲ್ಲಿ ಮಾತನಾಡಿದರು.

ಪ್ರಧಾನಿ ನರೇಂದ್ರ ಮೋದಿಯವರ ನೇತೃತ್ವದ ಎನ್‌ಡಿಎ ಮೈತ್ರಿ ಕೂಟ ಈ ಬಾರಿಯ ಪಶ್ಚಿಮ ಬಂಗಾಳದ ವಿಧಾನಸಭಾ ಚುನಾವಣೆಯಲ್ಲಿ ಅಭೂತಪೂರ್ವ ಗೆಲುವು ಸಾಧಿಸಿದೆ. ಈ ಗೆಲುವು ದೇಶದ ಮುಂದಿನ ಚುನಾವಣೆಗಳಿಗೆ ದಿಕ್ಸೂಚಿ ಯಾಗಿದೆ. ಈ ಸಂಬಂಧ ಕೇಂದ್ರ ಸಚಿವ ಸಂಪುಟ ಸಭೆಯಲ್ಲಿ ಭಾಗವಹಿಸಲು ತುರ್ತಾಗಿ ದೆಹಲಿಗೆ ಹೋಗಬೇಕಾಗಿದೆ ಎಂದರು.

ಕಳೆದ ಲೋಕಸಭಾ ಚುನಾವಣೆಯಲ್ಲಿ ತುಮಕೂರು ಕ್ಷೇತ್ರದಿಂದ ಜೆಡಿಎಸ್ ಮತ್ತು ಬಿಜೆಪಿ ಮೈತ್ರಿ ಅಭ್ಯರ್ಥಿಯಾದ ವಿ. ಸೋಮಣ್ಣ ಅವರನ್ನು ನೀವೆಲ್ಲಾ ದಾಖಲೆ ಮತಗಳ ಅಂತರದಿಂದ ಗೆಲ್ಲಿಸಿದ ಪರಿಣಾಮ ಅವರು ಹಾಗೂ ತಾವು ಕೇಂದ್ರ ಮಂತ್ರಿ ಯಾಗಲು ಅವಕಾಶವಾಯಿತು. ಮುಂಬರುವ ಚುನಾವಣೆಗಳಲ್ಲೂ ಇದೇ ರೀತಿಯಲ್ಲಿ ಆಶೀರ್ವಾದ ಮಾಡಬೇಕು ಎಂದು ಕುಮಾರಸ್ವಾಮಿ ಮನವಿ ಮಾಡಿದರು.

ರಾಜ್ಯದಲ್ಲಿರುವ ಸರ್ಕಾರದ ಆಡಳಿತದಿಂದ ಜನ ಬೇಸತ್ತಿದ್ದಾರೆ, ಬದಲಾವಣೆ ಬಯಸಿದ್ದಾರೆ. ಜನಪರವಾದ, ಜನರ ಸಮಸ್ಯೆಗಳಿಗೆ ಸ್ಪಂದಿಸುವ ಸರ್ಕಾರ ಅಸ್ತಿತ್ವಕ್ಕೆ ಬರಬೇಕು. ಮುಂದಿನ ಚುನಾವಣೆಯಲ್ಲಿ ಜನರಿಗೆ ಗೌರವ ತರುವಂತಹ ಜೆಡಿಎಸ್-ಬಿಜೆಪಿ ಮೈತ್ರಿ ಸರ್ಕಾರವನ್ನು ಅಧಿಕಾರಕ್ಕೆ ತರಬೇಕು ಎಂದು ವಿನಂತಿಸಿದರು.

ಜಿಲ್ಲಾ ಜೆಡಿಎಸ್ ಅಧ್ಯಕ್ಷ ಎಚ್. ನಿಂಗಪ್ಪ, ಜೆಡಿಎಸ್ ಶಾಸಕಾಂಗ ಪಕ್ಷದ ನಾಯಕ ಸಿ.ಬಿ. ಸುರೇಶ್‌ಬಾಬು, ಶಾಸಕರಾದ ಬಿ. ಸುರೇಶ್‌ಗೌಡ, ಎಂ.ಟಿ. ಕೃಷ್ಣಪ್ಪ, ವಿಧಾನ ಪರಿಷತ್ ಮಾಜಿ ಸದಸ್ಯ ಚೌದರೆಡ್ಡಿ, ಜೆಡಿಎಸ್ ತುಮಕೂರು ನಗರ ಅಧ್ಯಕ್ಷ ಟಿ.ಹೆಚ್. ಜಯರಾಮ್, ಗ್ರಾಮಾಂತರ ಅಧ್ಯಕ್ಷ ನಾಗವಲ್ಲಿರಾಮು, ಜಿಲ್ಲಾ ಜೆಡಿಎಸ್ ಕಾರ್ಯಾಧ್ಯಕ್ಷ ಟಿ.ಆರ್. ನಾಗರಾಜು, ಮುಖಂಡರಾದ ಯೋಗಾನಂದಕುಮಾರ್, ಸೋಲಾರ್‌ಕೃಷ್ಣಮೂರ್ತಿ, ಭೈರೇಶ್, ಕೆಂಪರಾಜು ಭಾಗವಹಿಸಿದ್ದರು.



ತುಮಕೂರು ತಾಲೂಕು ಮುಳಕುಂಟೆ ಗ್ರಾಮದಲ್ಲಿ ಮಂಗಳವಾರ ನಡೆದ ವಿಜಯ ಚೌಡೇಶ್ವರಿ ದೇವಿ ಜಾತ್ರಾ ಮಹೋತ್ಸವವನ್ನು ಕೇಂದ್ರ ಉಕ್ಕು ಮತ್ತು ಭಾರಿ ಕೈಗಾರಿಕಾ ಸಚಿವ ಎಚ್.ಡಿ. ಕುಮಾರಸ್ವಾಮಿ ಉದ್ಘಾಟಿಸಿದರು.

ಗುಬ್ಬಿ ತಾಲೂಕಿನ ಮಡೇನಹಳ್ಳಿ ಗ್ರಾಮದ ಶ್ರೀ ತಿರುಮಲ ಹಾಗೂ ಚಿಕ್ಕಮ್ಮ ದೊಡ್ಡಮ್ಮ ದೇವಾಲಯದ ಜೀರ್ಣೋದ್ಧಾರಕ್ಕೆ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಯೋಜನಾಧಿಕಾರಿ ಜಯಂತಿ 2.50 ಲಕ್ಷ ರು. ಗಳ ದೇಣಿಗೆ ಡಿಡಿಯನ್ನು ದೇವಾಲಯ ಸಮಿತಿಗೆ ನೀಡಿದರು. ಈ ವೇಳೆ ದೇವಾಲಯ ಸಮಿತಿ ಅಧ್ಯಕ್ಷ ಎಂ.ಸಿ.ಲಿಂಗಪ್ಪ ಸಿದ್ದರಾಮಣ್ಣ, ಮಲ್ಲೇಶ್, ಹೇಮಲತಾ, ದೀಪಿಕಾ ಸೇರಿದಂತೆ ಊರಿನ ಗಣ್ಯರು, ಭಕ್ತರು ಹಾಜರಿದ್ದರು.



ಪೌರಾಣಿಕ ನಾಟಕ ಜೀವನದ ಪ್ರತಿಬಿಂಬ

ಗುಬ್ಬಿಯಲ್ಲಿ ಕುರುಕ್ಷೇತ್ರ ನಾಟಕ ಪ್ರದರ್ಶನಕ್ಕೆ ಚಾಲನೆಯಲ್ಲಿ ಭಾರತಿ ಶ್ರೀನಿವಾಸ್



ಗುಬ್ಬಿ: ಪೌರಾಣಿಕ ನಾಟಕಗಳು ಜೀವನದ ಪ್ರತಿಬಿಂಬವಾಗಿದ್ದು, ಜನಸಾಮಾನ್ಯರು ನಾಟಕದಲ್ಲಿ ಬರುವ ಉತ್ತಮ ಪಾತ್ರಧಾರಿಗಳ ಆದರ್ಶಗಳನ್ನು ಬದುಕಿನಲ್ಲಿ ಅಳವಡಿಸಿಕೊಳ್ಳುವ ಮೂಲಕ ಅಭಿವೃದ್ಧಿಯತ್ತ ಸಾಗಬೇಕು ಎಂದು ಮಲ್ಲಸಂದ್ರ ಹಾಲು ಒಕ್ಕೂಟದ ನಿರ್ದೇಶಕರಾದ ಭಾರತಿ ಶ್ರೀನಿವಾಸ್ ತಿಳಿಸಿದರು.

ಪಟ್ಟಣದ ಪಶುಆಹಾರ ಕಾರ್ಖಾನೆ ಆವರಣದಲ್ಲಿ ತಾಲೂಕಿನ ಹಾಲು ಉತ್ಪಾದಕರ ಸಹಕಾರ ಸಂಘಗಳ ಕಾರ್ಯದರ್ಶಿಗಳಿಂದ ಕುರುಕ್ಷೇತ್ರ ಪೌರಾಣಿಕ ನಾಟಕದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಸಮಾಜದಲ್ಲಿ ಹೆಚ್ಚಾಗುತ್ತಿರುವ ಆಧುನಿಕತೆಯಲ್ಲಿ ನಾಡಿನ ವೈಭವ ಮತ್ತು ಇತಿಹಾಸವನ್ನು ತಿಳಿಸುವಂತಹ ಕಲೆ, ಸಾಹಿತ್ಯ, ಸಂಸ್ಕೃತಿ, ಪರಂಪರೆ ಕಣ್ಮರೆಯಾಗುತ್ತಿದೆ. ಪೌರಾಣಿಕ ನಾಟಕಗಳು ನಮ್ಮ ಜೀವನದ ಪ್ರತಿಬಿಂಬವಾಗಿದ್ದು, ಜನಸಾಮಾನ್ಯರು ನಾಟಕದಲ್ಲಿ ಬರುವ ಉತ್ತಮವಾದ ಪಾತ್ರಧಾರಿಗಳ ಆದರ್ಶಗಳನ್ನು ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು. ಪಾಶ್ಚಾತ್ಯ ಸಂಸ್ಕೃತಿಯ ಪ್ರಭಾವ ಹಾಗೂ ದೃಶ್ಯಮಾಧ್ಯಮಗಳ ಹಾವಳಿಯಿಂದಾಗಿ ಪೌರಾಣಿಕ ಕಲೆಗಳು ದಿನದಿಂದ ದಿನಕ್ಕೆ ತೆರೆಮರೆಗೆ ಸರಿಯುತ್ತಿವೆ. ಇಂತಹ ಕಲೆಗಳನ್ನು ಉಳಿಸಿ, ಪೋಷಣೆ ಮಾಡಿ ಮುಂದಿನ ಪೀಳಿಗೆಗೆ ಇವುಗಳ ಮಹತ್ವವನ್ನು ತಿಳಿಸಿಕೊಡುವ ಹೊಣೆಗಾರಿಕೆ ಪ್ರತಿಯೊಂದು ಸಂಘ ಸಂಸ್ಥೆಗಳು ಮಾಡಬೇಕು ಎಂದರು. ಈ ವೇಳೆ ಶಾಸಕ ಎಸ್.ಆರ್. ಶ್ರೀನಿವಾಸ್, ತುಮುಲ್ ನಿರ್ದೇಶಕರಾದ ಕೊಂಡವಾಡಿ ಚಂದ್ರಶೇಖರ್, ಶಂಕರ್‌ನಾಗ್, ಲೋಕೇಶ್, ಮಹೇಶ್, ಸಿದ್ದಲಿಂಗಯ್ಯ, ನಂಜೇಗೌಡರು, ಚೆನ್ನಮಲ್ಲಯ್ಯ ಉಳ್ಳೇನಹಳ್ಳಿಪ್ರಕಾಶ್, ಯೋಗೀಶ್, ವೆಂಕಟೇಶ್, ಶ್ರೀನಿವಾಸ್, ಗಿರೀಶ್, ಜಗದೀಶ್, ಜುಂಜೇಗೌಡ, ಹುಣಸೆಪಾಳ್ಯ ಜಗದೀಶ್ ಇದ್ದರು.

ಸಂಭ್ರಮ | ಮಧುಗಿರಿಯಲ್ಲಿ ಕನ್ನಡ ಸಾಹಿತ್ಯ ಪರಿಷತ್ತು ಸಂಸ್ಥಾಪನಾ ದಿನಾಚರಣೆ

ಕಸಾಪ ನಾಡಿನ ಜನತೆ ಸ್ವಾಭಿಮಾನದ ಪ್ರತೀಕ: ಪ್ರೊ.ಸಿ.ಕೃಷ್ಣಪ್ಪ

• **ಕನ್ನಡಪ್ರಭವಾರ್ತೆ** ಮಧುಗಿರಿ

ಕಸಾಪ ನಾಡಿನ ಜನತೆಯ ಸ್ವಾಭಿಮಾನದ ಪ್ರತೀಕ ಎಂದು ನಿವೃತ್ತ ಪ್ರಾಂಶುಪಾಲ ಪ್ರೊ. ಸಿ. ಕೃಷ್ಣಪ್ಪ ಅಭಿಪ್ರಾಯಪಟ್ಟರು.

ಪಟ್ಟಣದ ಶ್ರೀ ಟಿವಿ ವಿ ಪದವಿಪೂರ್ವ ಕಾಲೇಜು ಮತ್ತು ಸಾಹಿತ್ಯ ಮಂದಾರ ವೇದಿಕೆ ಸಂಯುಕ್ತವಾಗಿ ಆಯೋಜಿಸಿದ್ದ ಕನ್ನಡ ಸಾಹಿತ್ಯ ಪರಿಷತ್ತು ಸಂಸ್ಥಾಪನಾ ದಿನಾಚರಣೆಯಲ್ಲಿ ಭಾಗವಹಿಸಿ ಮಾತನಾಡಿ. ಮೊದಲು ಕರ್ನಾಟಕ ಸಾಹಿತ್ಯ ಪರಿಷತ್ತು ಎಂಬ ಹೆಸರಿಂದ ಪ್ರಾರಂಭವಾಗಿ ಮೈಸೂರು, ಹೈದರಾ ಬಾದ್, ಕೊಡಗು, ಪ್ರಾಂತ್ಯ ಪ್ರತಿನಿಧಿಗಳನ್ನು ಒಳಗೊಂಡಿತ್ತು. ಆ ನಂತರ ಎಚ್.ವಿ ನಂಜುಂಡಯ್ಯ ನವರು 5-5-1915 ರಲ್ಲಿ ನಾಲ್ವಡಿ ಕೃಷ್ಣರಾಜ ಒಡೆಯರ್ ಮತ್ತು ಸರ್ ಎಂ. ವಿಶ್ವೇಶ್ವರಯ್ಯನವರ ನೇತೃತ್ವದಲ್ಲಿ ಪ್ರಾರಂಭಗೊಂಡಿತು. ಇಂದು ಅದರ ಸಾಧನೆ ಕನ್ನಡ ಕನ್ನಡಿಗ ಕರ್ನಾಟಕದ ಸಾಹಿತ್ಯ ಮತ್ತು ಸಾಂಸ್ಕೃತಿಕ ಹಿತ ರಕ್ಷಣೆಯಾಗಿದೆ. ವಿವಿಧ ಪ್ರಸಿದ್ಧ ಸಾಹಿತಿಗಳು ಇದಕ್ಕೆ ನೀಡಿದ ಸಹಕಾರ ಸಲಹೆ ಇಲ್ಲಿವರೆಗಿನ ಸಾಧನೆಗೆ ಸಾಕ್ಷಿಯಾಗಿದೆ ಎಂದರು.



ಹಿರಿಯ ಸಾಹಿತಿ ಮಲನ ಮೂರ್ತಿ ಮಾತನಾಡಿ, ಕಸಪ ಅಧ್ಯಕ್ಷ ಸ್ಥಾನಕ್ಕೆ ನಡೆಯುವ ಚುನಾವಣೆಯಲ್ಲಿ ಮಹಿಳೆಯರು, ದಲಿತರಾಗಲಿ ಸ್ಪರ್ಧಿಸದಿರುವುದು ಆಶ್ಚರ್ಯ? ಇದಕ್ಕೂ ಮೀಸಲಾತಿ ತರಬೇಕೆ? ಆಗಾಗ ಪರಿಷತ್ತಿಗೆಆಡಳಿತಅಧಿಕಾರಿಗಳನ್ನುನೇಮಿಸುತ್ತಿರುವುದು ಸಂಶಯ ಮೂಡಿಸಿದೆ ಎಂದು ವಿಷಾದಿಸಿದರು.

ಉಪನ್ಯಾಸಕ ಮಂಜುಪ್ರಸಾದ್ ಮಾತನಾಡಿ, ಸಾಹಿತ್ಯ ಸಮ್ಮೇಳನಗಳ ಚಟುವಟಿಕೆಗಳು ನಗರಕ್ಕೆ ಸೀಮಿತವಾಗಿದೆಯೇ ವಿನಃ ಗ್ರಾಮೀಣ ಕನ್ನಡ ಮನಸುಗಳಿಗೆ ಇದುವರೆಗೂ ತಲುಪಿಲ್ಲ. ನಿಜವಾದ ಕನ್ನಡ ಪ್ರೇಮ, ಗೌರವ, ಮರೆತು. ದೇಶಿಯ ಕನ್ನಡ ಶಾಲೆಗಳು ಮುಚ್ಚುವ ಸ್ಥಿತಿ ನಿರ್ಮಾಣವಾಗುತ್ತದೆ. ಇಂದಿನ ಯುವಕರು ಸಾಹಿತ್ಯ ಪುಸ್ತಕಗಳು ಓದುವ ಅಭ್ಯಾಸ ಮಾಡಿಕೊಳ್ಳಬೇಕು ಎಂದರು. ಪ್ರಾಂಶುಪಾಲ ಹನುಮಂತರಾಯಪ್ಪ ಅಧ್ಯಕ್ಷತೆ ಎಂ ಆರ್‌ವೆಂಕಟೇಶ್ ಮೂರ್ತಿ ಸತೀಶ್ ಮೋಹನ್, ಹೇಮಂತ್‌ಬಾಬು ಜಾನ್, ಅನಂತರಾಜು ನಾಗಭೂಷಣ್ ತೇಜ ನಿಖಿಲ್ ಅಶ್ವಥ್ ನಾರಾಯಣ್ ಇದ್ದರು.

20ರಂದು ರಾಜ್ಯ ಸರ್ಕಾರದಿಂದ ಪಕ್ಷಾತೀತ ಸಮಾವೇಶ

ಸಿಎಂ ಸಿದ್ದರಾಮಯ್ಯ ಉದ್ಘಾಟನೆ: ಗೃಹ , ಜಿಲ್ಲಾ ಉಸ್ತುವಾರಿ ಸಚಿವ ಡಾ. ಜಿ. ಪರಮೇಶ್ವರ್ ಮಾಹಿತಿ



ಸರ್ಕಾರಿ ಸಮಾವೇಶದ ಕುರಿತು ಗೃಹ, ಜಿಲ್ಲಾ ಉಸ್ತುವಾರಿ ಸಚಿವ ಡಾ. ಜಿ. ಪರಮೇಶ್ವರ್ ಅಧಿಕಾರಿಗಳೊಂದಿಗೆ ಸಭೆ ನಡೆಸಿದರು.

• **ಕನ್ನಡಪ್ರಭ ವಾರ್ತೆ,** ತುಮಕೂರು

ತುಮಕೂರಿನಲ್ಲಿ 20 ರಂದು ನಡೆಯಲಿರುವ ಬೃಹತ್ ಸಮಾವೇಶ ರಾಜ್ಯ ಸರ್ಕಾರದ ಹಾಗೂ ಪಕ್ಷಾತೀತ ಸಮಾವೇಶವಾಗಿದೆ ಎಂದು ಗೃಹ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ. ಜಿ. ಪರಮೇಶ್ವರ್ ತಿಳಿಸಿದ್ದಾರೆ.

ಜಿಲ್ಲಾಧಿಕಾರಿಗಳಕಚೇರಿಯಲ್ಲಿಮಂಗಳವಾರ ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳೊಂದಿಗೆ ಸಮಾವೇಶದ ಪೂರ್ವಭಾವಿ ಸಭೆ ನಡೆಸಿದ ಅವರು, ಮೇ 20 ರಂದು ರಾಜ್ಯ ಸರ್ಕಾರಕ್ಕೆ 3 ವರ್ಷ ತುಂಬುತ್ತಿದೆ. ಅಲ್ಲದೆ, ತುಮಕೂರಿನಲ್ಲಿ ರಾಜ್ಯದ ಯಾವ ಜಿಲ್ಲೆಯಲ್ಲೂ ಆಗದಿರುವ ಅಭಿವೃದ್ಧಿ ಕಾರ್ಯಗಳು ನಡೆದಿವೆ. ಈ ಹಿನ್ನೆಲೆಯಲ್ಲಿ ಬೃಹತ್ ಸಮಾವೇಶವನ್ನು ತುಮಕೂರಿನಲ್ಲಿ ಆಯೋಜಿಸುತ್ತಿದ್ದು, ಇದು ಸರ್ಕಾರಿ ಕಾರ್ಯಕ್ರಮ ಹಾಗೂ ಪಕ್ಷಾತೀತ ಕಾರ್ಯಕ್ರಮವಾಗಿದೆ ಎಂದು ಅವರು ಸ್ಪಷ್ಟಪಡಿಸಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸಮಾವೇಶವನ್ನು ಉದ್ಘಾಟಿಸಲಿದ್ದು, ಈ ಕಾರ್ಯಕ್ರಮದಲ್ಲಿ ಕಂದಾಯ ಇಲಾಖೆಯಿಂದ 1.85 ಲಕ್ಷ ಫಲಾನುಭವಿಗಳಿಗೆ ಕಂದಾಯ ಗ್ರಾಮದ ಹಕ್ಕುಪತ್ರಗಳು, ಪೌತಿಖಾತೆ ಸೇರಿದಂತೆ ವಿವಿಧ ಸವಲತ್ತುಗಳನ್ನು ನೀಡಲಾಗುತ್ತಿದೆ. ಅಲ್ಲದೆ, ಸುಮಾರು 80ಸಾವಿರಕ್ಕೂ ಹೆಚ್ಚು ಮಂದಿಗೆ ವಿವಿಧ ಇಲಾಖೆಗಳ ಸವಲತ್ತುಗಳನ್ನು ವಿತರಿಸಲಾಗುತ್ತಿದೆ ಎಂದರು.

ಇದೇ ಕಾರ್ಯಕ್ರಮದಲ್ಲಿ ರಾಜ್ಯ ಸರ್ಕಾರ ಜಾರಿಗೆ ತಂದಿರುವ ಅಭೂತಪೂರ್ವ ಯೋಜನೆಗಳ ಕುರಿತು ರಾಜ್ಯ ಹಾಗೂ ಜಿಲ್ಲಾ ಮಟ್ಟದ ಪ್ರತ್ಯೇಕ ವಸ್ತುಪ್ರದರ್ಶನವನ್ನು ಹಮ್ಮಿಕೊಳ್ಳಲಾಗುತ್ತಿದೆ. ಅಲ್ಲದೆ, ತುಮಕೂರು ಜಿಲ್ಲೆಯಲ್ಲಿ ಕೈಗೊಂಡಿರುವ ವಿವಿಧ ಅಭಿವೃದ್ಧಿ ಕಾಮಗಾರಿಗಳ ಶಿಲಾನ್ಯಾಸ ಹಾಗೂ ಉದ್ಘಾಟನಾ ಕಾರ್ಯಕ್ರಮಗಳು ನಡೆಯಲಿವೆ ಎಂದು ಸಚಿವರು ಮಾಹಿತಿ ನೀಡಿದರು.

ಕಾರ್ಯಕ್ರಮಕ್ಕೆ 2 ಲಕ್ಷಕ್ಕೂ ಹೆಚ್ಚು ಫಲಾನುಭವಿಗಳು ಆಗಮಿಸಲಿದ್ದು, ಅವರಿಗೆ ಸೂಕ್ತಊಟ,ಸಾರಿಗೆವ್ಯವಸ್ಥೆಕೈಗೊಳ್ಳಬೇಕಾಗಿದೆ. ಈ ನಿಟ್ಟಿನಲ್ಲಿ ಅಧಿಕಾರಿಗಳು ಯಾವುದೇ ಕೊರತೆ ಇಲ್ಲದಂತೆ ನಿರ್ವಹಿಸಲು ಸೂಚಿಸಲಾಗಿದೆ ಎಂದು ತಿಳಿಸಿದರು.

ಸದರಿ ಕಾರ್ಯಕ್ರಮ ಸಂಪೂರ್ಣವಾಗಿ ಸರ್ಕಾರಿ ಕಾರ್ಯಕ್ರಮವಾಗಿದ್ದು, ಇದರಲ್ಲಿ ಯಾವುದೇ ಪಕ್ಷ, ಸಂಘಟನೆ ಇರುವುದಿಲ್ಲ. ಶಿಷ್ಟಾಚಾರದಂತೆ ಗಣ್ಯರನ್ನು ಕಾರ್ಯಕ್ರಮಕ್ಕೆ ಆಹ್ವಾನಿಸಲಾಗಿದ್ದು, ಎಲ್ಲಾ ಆಹ್ವಾನಿತರು ಕಾರ್ಯಕ್ರಮದಲ್ಲಿ ಪಕ್ಷಭೇದ ಮರೆತು ಭಾಗವಹಿಸಬೇಕು ಹಾಗೂ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಅವರು ತಿಳಿಸಿದರು.

ಸಭೆಯಲ್ಲಿ ಕೆಎಸ್ಆರ್‌ಟಿಸಿ ನಿಗಮದ ಅಧ್ಯಕ್ಷ ಎಸ್.ಆರ್. ಶ್ರೀನಿವಾಸ್, ಶಾಸಕರಾದ ಕೆ. ಷಡಾಕ್ಷರಿ, ಸಿ.ಬಿ. ಸುರೇಶ್ ಬಾಬು, ಬಿ. ಸುರೇಶ್‌ಗೌಡ, ಜಿ.ಬಿ. ಜ್ಯೋತಿಗಣೇಶ್, ಬಿಎಂಟಿಸಿ ನಿಗಮದ ಉಪಾಧ್ಯಕ್ಷ ನಿಕೇತ್ ರಾಜ್ ಎಂ., ಜಿಲ್ಲಾಧಿಕಾರಿ ಶುಭ ಕಲ್ಯಾಣ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ವಿ. ಅಶೋಕ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಬಿ.ವಿ. ಅಶ್ವಿಜ, ಮತ್ತಿತರರು ಉಪಸ್ಥಿತರಿದ್ದರು.

ಬಿಎಸ್‌ವೈ ಅಭಿಮಾನೋತ್ಸವಕ್ಕೆ 10 ಸಾವಿರ ಜನ

ಕಾರ್ಯಕ್ರಮದ ಪೂರ್ವಭಾವಿ ಸಭೆಯಲ್ಲಿ ಮಾಜಿ ಶಾಸಕ ಮಸಾಲಾ ಜಯರಾಮ್



• **ಕನ್ನಡಪ್ರಭವಾರ್ತೆ** ತುರುವೇಕೆರೆ

ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪನವರ ಅಭಿಮಾನೋತ್ಸವಕ್ಕೆ ತುರುವೇಕೆರೆ ವಿಧಾನಸಭಾ ಕ್ಷೇತ್ರದಿಂದ ಸುಮಾರು 10 ಸಾವಿರಕ್ಕೂ ಹೆಚ್ಚು ಬಿಜೆಪಿ ಕಾರ್ಯಕರ್ತರು, ಅವರ ಅಭಿಮಾನಿಗಳು ತೆರಳುತ್ತಿದ್ದಾರೆಂದು ಮಾಜಿ ಶಾಸಕ ಮಸಾಲಾ ಜಯರಾಮ್ ತಿಳಿಸಿದರು.

ಪಟ್ಟಣದ ಸಮೀಪದಲ್ಲಿರುವ ಅವರ ಫಾರಂ ಹೌಸ್ ನಲ್ಲಿ ನಡೆದ ಬಿಎಸ್.ವೈ ಅಭಿಮಾನೋತ್ಸವ ಕಾರ್ಯಕ್ರಮದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ದಕ್ಷಿಣ ರಾಜ್ಯಗಳ ಪೈಕಿ ಕರ್ನಾಟಕದಲ್ಲಿ ಬಿಜೆಪಿ ಅಧಿಕಾರಕ್ಕೆ ತಂದ ಕೀರ್ತಿ ಬಿಎಸ್.ವೈಗೆ ಸಲ್ಲುತ್ತದೆ. ರಾಜ್ಯದಲ್ಲಿ ಕೇವಲ 2 ಸ್ಥಾನಗಳಿಂದ ಬಿಜೆಪಿ ಆರಂಭಿಸಿತ್ತು. ನಂತರ ಸ್ವಂತ ಬಲದಲ್ಲಿ ಬಿಜೆಪಿ ಪಕ್ಷ ರಾಜ್ಯದಲ್ಲಿ ಅಧಿಕಾರ ನಡೆಸುವ ಹಂತಕ್ಕೆ ಬಂದಿರುವುದು ಬಿಎಸ್.ವೈ ರವರ ಶ್ರಮದಿಂದ. ಸೈಕಲ್ ನಲ್ಲಿ ರಾಜ್ಯವನ್ನು ಸುತ್ತಿ ಪಕ್ಷ ಸಂಘಟನೆ ಮಾಡಿದ ಫಲವಾಗಿ ಇಂದು ಬಿಜೆಪಿ ರಾಜ್ಯದಲ್ಲಿ ಬೃಹತ್ ಹೆಮ್ಮರವಾಗಿ ಬೆಳೆದಿದೆ. ಸಾವಿರಾರು ರೈತರ ಪರ ಹೋರಾಟಗಳನ್ನು ಮಾಡಿ ರೈತ ನಾಯಕನಾಗಿ ಬೆಳೆದಿದ್ದಾರೆ. ನಾಲ್ಕು ಬಾರಿ ಮುಖ್ಯಮಂತ್ರಿಯಾಗಿ ಜನಪರವಾದ ಯೋಜನೆಗಳನ್ನು ನೀಡಿದ್ದಾರೆ. ಶಾಲಾ ಮಕ್ಕಳಿಗೆ ಸೈಕಲ್, ಹಾಲಿಗೆ ಪ್ರೋತ್ಸಾಹ ಧನ, ಭಾಗ್ಯಲಕ್ಷ್ಮಿ ಯೋಜನೆ, ಕೃಷಿ ಬಜೆಟ್ ಮಂಡಿಸಿದ ಬಿಎಸ್.ವೈ ರವರನ್ನು ರಾಜ್ಯದ ಅಭಿವೃದ್ದಿಯ ಹರಿಕಾರ ಎಂದರೂ ತಪ್ಪಾಗಲಾರದು. ರೈತರ ಪರ ಹಲವು ಯೋಜನೆಗಳನ್ನು ನೀಡಿದ್ದಾರೆ.

ನಾನು ಶಾಸಕನಾದ ಸಂದರ್ಭದಲ್ಲಿ ರಾಜ್ಯದ ಮುಖ್ಯಮಂತ್ರಿಯಾಗಿದ್ದ ಯಡಿಯೂರಪ್ಪನವರು ತಾಲೂಕಿನ ಅಭಿವೃದ್ದಿಗೆ ಸಾವಿರಾರು ಕೋಟಿ ಅನುದಾನ ನೀಡಿದ್ದಾರೆ. ಮೇ 9 ರಂದು ಚಿತ್ರದುರ್ಗದ ಸಮಾರಂಭಕ್ಕೆ ಹೋಗುವುದೇ ನಮ್ಮ ಪುಣ್ಯ. ಅದು ಅವರಿಗೆ ನೀಡುವ ಗೌರವ. ನಮ್ಮ ಕ್ಷೇತ್ರದಿಂದ ಸುಮಾರು ಹತ್ತು ಸಾವಿರಕ್ಕೂ ಹೆಚ್ಚಿನ ಕಾರ್ಯಕರ್ತರು ಭಾಗವಹಿಸಬೇಕು ಎಂದು ಮನವಿ ಮಾಡಿದರು.

ಸಭೆಯಲ್ಲಿ ಬಿಜೆಪಿ ತಾಲೂಕು ಅಧ್ಯಕ್ಷ ಪ್ರಕಾಶ್, ಉಪಾಧ್ಯಕ್ಷರಾದ ಸಂತೋಷ್ ಕಂಟ್ಲಿ, ನವೀನ್ ಬಾಬು, ಸಿದ್ದಪ್ಪಾಜಿ, ಜಿಲ್ಲಾ ಉಪಾಧ್ಯಕ್ಷ ಕೊಂಡಜ್ಜಿ ವಿಶ್ವನಾಥ್, ಜಿಲ್ಲಾ ಕಾರ್ಯದರ್ಶಿ ಬಸವರಾಜ್, ಹಿರಿಯ ಮುಖಂಡ ಅರಳಿಕೆರೆ ಶಿವಯ್ಯ, ಕಲ್ಕೆರೆ ಮೃತ್ಯುಂಜಯ, ಹಾಲೇಗೌಡ, ಉಗ್ರಯ್ಯ, ತೀರ್ಥಕುಮಾರ್, ಜಗದೀಶ್, ಪದ್ಮಾವತಿ, ರಾಧಾ, ಅನಿತಾ ನಂಜುಂಡಯ್ಯ, ಚೂಡಾಮಣಿ, ಸಾವಿತ್ರಮ್ಮ ಸೇರಿದಂತೆ ಎಲ್ಲಾ ಹೋಬಳಿ ಅಧ್ಯಕ್ಷರು, ಬೂತ್ ಮಟ್ಟದ ಮುಖಂಡರು ಮತ್ತು ಕಾರ್ಯಕರ್ತರು ಇದ್ದರು.

ಸಣ್ಣಮುದ್ದಯ್ಯ ಸೇವೆಗೆ ಜನರ ಮೆಚ್ಚುಗೆ

ನುಡಿನಮನ ಕಾರ್ಯಕ್ರಮದಲ್ಲಿ ಶಾಸಕ ಕೆ.ಎನ್.ರಾಜಣ್ಣ ಅಭಿಮತ



• **ಕನ್ನಡಪ್ರಭವಾರ್ತೆ** ಮಧುಗಿರಿ

ಸರ್ಕಾರಿ ನೌಕರರು ಪ್ರಾಮಾಣಿಕವಾಗಿ ಜನ ಹಿತಕ್ಕಾಗಿ ಕರ್ತವ್ಯ ಮಾಡಿ ಮೆಚ್ಚುಗೆ ಗಳಿಸುವುದು ಅಷ್ಟು ಸುಲಭವಲ್ಲ, ಆದರೂ ತನ್ನ ಸೇವಾವಧಿಯಲ್ಲಿ ಜನಪರವಾಗಿ ಕಾರ್ಯ ನಿರ್ವಹಿಸುತ್ತಾ ಸಮಾಜದ ಮೆಚ್ಚುಗೆ ಮತ್ತು ಸಹೋದ್ಯೋಗಿಗಳ ಮೆಚ್ಚುಗೆಗೆ ಜಿ.ಎಂ.ಸಣ್ಣಮುದ್ದಯ್ಯ ಪಾತ್ರರಾಗಿದ್ದಾರೆ ಎಂದು ಶಾಸಕ ಕೆ.ಎನ್.ರಾಜಣ್ಣ ಅಭಿಪ್ರಾಯಪಟ್ಟರು.

ಇಲ್ಲಿನ ತಾಲೂಕು ಯಾದವ ಸಮುದಾಯದ ಭವನದಲ್ಲಿ ನಿವೃತ್ತ ತಹಸೀಲ್ದಾರ್‌ದಿ.ಜಿ.ಎಂ.ಸಣ್ಣಮುದ್ದಯ್ಯರವರ ಸ್ಮರಣಾರ್ಥ ಏರ್ಪಡಿಸಿದ್ದ ನುಡಿನಮನ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಜಿ.ಎಂ.ಸಣ್ಣಮುದ್ದಯ್ಯ ಜಿಲ್ಲಾ ಸರ್ಕಾರಿ ನೌಕರರ ಸಂಘದ ಅಧ್ಯಕ್ಷರಾಗಿ ಸಮಸ್ತ ನೌಕರರ ಸಮಸ್ಯಗಳಿಗೆ ಸದಾ ಸ್ಪಂದಿಸುತ್ತಾ ಪರಿಹಾರೋಪಯ ಮಾರ್ಗಗಳನ್ನು ಸೂಚಿಸುತ್ತಿದ್ದರಲ್ಲದೆ ನೌಕರರ ಹಿತ ಕಾಪಾಡುವಲ್ಲಿ ತಮ್ಮ ಸೇವಾವಧಿಯ ಉದ್ದಗಲಕ್ಕೂ ತೊಡಗಿಸಿಕೊಂಡಿದ್ದರಲ್ಲದೆ ತಾಲೂಕು ದಂಡಾಧಿಕಾರಿಯಾಗಿಯೂ ಕಾರ್ಯ ನಿರ್ವಹಿಸುವಲ್ಲಿ ದಕ್ಷತೆ ,ಪ್ರಮಾಣಿತೆಯನ್ನು ಮೈಗೂಡಿಸಿಕೊಂಡಿದ್ದರು.ಅವರ ಸೇವಾಕಾರ್ಯ ಜನಮಾನಸದಲ್ಲಿ ಸ್ಥಿರವಾಗಿ ಉಳಿದಿದೆ ಎಂದರು.

ಈ ಯಾವದ ಸಮುದಾಯದ ಭವನ ನಿರ್ಮಾಣಕ್ಕೆ ಸರ್ಕಾರದಿಂದ ಈಗಾಗಲೇ 3 ಕೋಟಿ ರು.ಮಂಜೂರು ಮಾಡಿಸಿದ್ದು,ಮತ್ತಷ್ಟು ಅನುದಾನ ತರಿಸಿ ಕೊಡುವುದಾಗಿ ಮತ್ತು ಅತಿ ಶೀಘ್ರದಲ್ಲೇ ಭವನ ಲೋಕಾರ್ಪಣೆಗೊಂಡು ಸಮಾಜದಮುಖಿ ಕಾರ್ಯಗಳು ಇಲ್ಲಿನ ನಡೆಯಬೇಕು ಎಂದರು.ಚಿತ್ರದುರ್ಗದ ಗೊಲ್ಲಗಿರಿ ಯಾದವ ಮಹಾಸಂಸ್ಥಾನದ ಶ್ರೀಕೃಷ್ಣಯಾದವನಂದ ಸ್ವಾಮೀಜಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ನಿವೃತ್ತ ಪ್ರಾಂಶುಪಾಲ ಪ್ರೊ.ಸಿ.ಕೃಷ್ಣಪ್ಪ, ಡಿಸಿಸಿ ಬ್ಯಾಂಕ್ ಉಪಾಧ್ಯಕ್ಷ ಜಿ.ಜೆ. ರಾಜಣ್ಣ,ಕೆಪಿಸಿಸಿ ಸದಸ್ಯ ಎಂ.ಎಸ್.ಮಲ್ಲಿಕಾರ್ಜುನಯ್ಯ, ತಾಲೂಕು ಯಾದವ ಸಂಘದ ಅಧ್ಯಕ್ಷ ಚಿನ್ನಪ್ಪ, ಪ್ರಧಾನ ಕಾರ್ಯದರ್ಶಿ ಎಂ.ಇ.ಕರಿಯಣ್ಣ,ಸಿಂಡಿಕೇಟ್ ಸದಸ್ಯ ಶಿವಣ್ಣ,ಗ್ರಾಪಂಮಾಜಿಅಧ್ಯಕ್ಷಸಿದ್ದಾಪುರವೀರಣ್ಣ,ತಾಲೂಕು ಅಲೆಮಾರಿ ಸಂಘದ ಅಧ್ಯಕ್ಷ ದೊಡ್ಡೀರಣ್ಣ, ಮುಖಂಡರಾದ ಮೂಡಲಗಿರೀಶ್,ನಿರಂಜನ್ ದಾಸ್, ಡಿ.ಎಚ್ .ನಾಗರಾಜು,ರಾಜ್ ಗೋಪಾಲ್ ಇತರರಿದ್ದರು.

ಭಾರತೀಯ ಜನತಾ ಪಾರ್ಟಿಯ ಕಾರ್ಯಕರ್ತರಿಂದ ಸಂಭ್ರಮಾಚರಣೆ

ನೆಲಮಂಗಲ: ಪಶ್ಚಿಮಬಂಗಾಳ, ಅಸ್ಸಾಂ, ಪುದುಚೇರಿ ರಾಜ್ಯಗಳಲ್ಲಿ ಭಾರತೀಯ ಜನತಾ ಪಾರ್ಟಿಯ ಗೆಲುವಿನ ಪ್ರಯುಕ್ತ ನಗರದ ಬಸ್ ನಿಲ್ದಾಣದ ಬಳಿ ಮುಂದೆ ಪಟಾಕಿ ಸಿಡಿಸಿ ಭಾರತೀಯ ಜನತಾ ಪಾರ್ಟಿಯ ಎಲ್ಲಾ ಕಾರ್ಯಕರ್ತರು ಸಿಹಿ ಹಂಚಿ ಸಂಭ್ರಮಿಸಿದರು. ಗೆಲುವಿಗೆ ಕಾರಣಿಭೂತರಾದ ನರೇಂದ್ರ ಮೋದಿ, ಗೃಹ ಸಚಿವ ಅಮಿತ್ಷಾ ಸೇರಿಂದಂತೆ ಹಲವು ನಾಯಕರಿಗೆ ಜೈಕಾರ ಕೂಗಿದರು. ಸಂಭ್ರಮಾಚರಣೆಯಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲಾಧ್ಯಕ್ಷ ರಾಮಕೃಷ್ಣಪ್ಪ, ತಾಲೂಕು ಪ್ರಧಾನ ಕಾರ್ಯದರ್ಶಿಗಳು ಸತೀಶ್ ಮತ್ತು ಬಾಬು, ತಾಲೂಕು ಮಹಿಳಾ ಅಧ್ಯಕ್ಷೆ ಮಂಜುಳಾ ಸುರೇಶ್ ನಗರಸಭಾ ಸದಸ್ಯ ಕೃಪಾನಂದ್, ಮುಖಂಡರಾದ ರಾಜಮ್ಮ, ಎಂ. ರವಿ ಶಾಂತ, ಎಚ್.ಡಿ. ಗಿರೀಶ್ ರಾಜೇಶ್ವರಿ ಮಂಗಳ ಶೈಲಜಾ ಇದ್ದರು.